ವಿಜಯಪುರ | ಸಂಪುಟ 04 | ಸಂಚಿಕೆ 051 | ಪುಟ 04 | ₹ 3.00

https://udayarashminews.com

udayarashmi 90088 88340

# ಉದಯ ರಶ್ಮಿ

Udayarashmi Kannada Daily

ಜನಪರ-ಜೀವಪರ

ಕನ್ನಡ ದಿನಪತ್ರಿಕೆ

ಸಂಪಾದಕ : ಇಂದುಶೇಖರ ಮಣೂರ

Editor: Indushekhar Manur

editor.udayarashmi@gmail.com

RNI NO: KARKAN/2023/86203

ಶನಿವಾರ, ಏಪ್ರಿಲ್, 11, 2026



"ಚುನಾವಣೆಯಲ್ಲಿ ಸೋಲು ಗೆಲುವು ಸಾಮಾನ್ಯ. ಚಾಮುಂಡೇಶ್ವರಿ ಕ್ಷೇತ್ರದಲ್ಲಿ ಸಿದ್ದರಾಮಯ್ಯ ಯಾಕೆ ಸೋತರು? ಜೆಡಿಎಸ್ ಬಗ್ಗೆ ಮಾತನಾಡುವ ನೈತಿಕತೆ ಅವರಿಗಿಲ್ಲ. ಸಿದ್ದರಾಮಯ್ಯ ಅಹಿಂದ ಚಾಂಪಿಯನ್ ಅಂತ ಹೇಳಿಕೊಳ್ಳುತ್ತಾರೆ. ಅವರು ಕಾಂಗ್ರೆಸ್ ಪಕ್ಷ ಬಿಟ್ಟು ಬಂದು 5 ಸ್ಥಾನ ಗೆಲ್ಲಲಿ."

■ ಎಚ್.ಡಿ.ಕುಮಾರಸ್ವಾಮಿ
ಕೇಂದ್ರ ಸಚಿವರು

### ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ | ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ.ಪಾಟೀಲ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ

# ಬೇಸಿಗೆ ನೀರು ನಿರ್ವಹಣೆಯಲ್ಲಿ ನಿರ್ಲಕ್ಷ್ಯ ಸಲ್ಲದು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಸದ್ಯಕ್ಕೆ ಜನ-ಜಾನುವಾರುಗಳಿಗೆ ಕುಡಿಯುವ ನೀರಿನ ಸಮಸ್ಯೆ ಉಲ್ಬಣಿಸಿಲ್ಲ. ಇಂಡಿ ಹಾಗೂ ಚಡಚಣ ಭಾಗದಲ್ಲಿ ನೀರಿನ ಸಮಸ್ಯೆ ತಲೆದೋರಬಹುದು. ಗ್ರಾಪಂ ಮಟ್ಟದಲ್ಲಿ ಕುಡಿಯುವ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಬೇಕು. ಈ ವಿಷಯದಲ್ಲಿ ನಿರ್ಲಕ್ಷ್ಯ ವಹಿಸುವ ಅಧಿಕಾರಿಗಳ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಬೃಹತ್ ಮತ್ತು ಮಧ್ಯಮ ಕೈಗಾರಿಕೆ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ. ಎಂ.ಬಿ. ಪಾಟೀಲ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನಡೆದ ಜಿಲ್ಲೆಯ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿನ ಕುಡಿಯುವ ನೀರಿನ ನಿರ್ವಹಣೆ ಕುರಿತ ನಡೆದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಬೇಸಿಗೆ ಸಂದರ್ಭದಲ್ಲಿ ಅಧಿಕಾ-ರಿಗಳು ಕ್ರಿಯಾಶೀಲರಾಗಿ ಕಾರ್ಯನಿರ್ವಹಿಸಬೇಕು.



ಗ್ರಾಮೀಣ ಹಾಗೂ ನಗರ ಪ್ರದೇಶದಲ್ಲಿ ಸಮಸ್ಯೆಗಳಿದ್ದಲ್ಲಿ ಜಿಲ್ಲಾ ಮಟ್ಟದ ಅಧಿಕಾರಿಗಳು ತಾಲೂಕು ಕೇಂದ್ರಗಳಿಗೆ ತಕ್ಷಣ ತೆರಳಿ ಸಭೆ ನಡೆಸಿ ನಿಮ್ಮ ನಿಮ್ಮ ಹಂತದಲ್ಲಿ ಸಮಸ್ಯೆ ಬಗೆಹ-ರಿಸಬೇಕು ಎಂದು ಸಚಿವರು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯ ಇಂಡಿ ಸೇರಿದಂತೆ ಎಲ್ಲೆಲ್ಲಿ ನೀರಿನ ಸಮಸ್ಯೆ ಉದ್ಭವಿಸಿದಲ್ಲಿ ತಕ್ಷಣವೇ ಪರ್ಯಾಯ ವ್ಯವಸ್ಥೆಗಳನ್ನು ಕೈಗೆತ್ತಿಕೊಂಡು ಯಾವುದೇ ನೀರಿನ ಸಮಸ್ಯೆಯಾಗದಂತೆ ಅಧಿಕಾರಿಗಳು ನೋಡಿಕೊಳ್ಳುವುದರತ್ತ ನಿಗಾ ವಹಿಸಬೇಕು. ಸಾಧ್ಯವಾದರೆ ಬೋರವೆಲ್ ನಂತಹ ಜಲಮೂಲಗಳನ್ನು ಗುರುತಿಸಿಟ್ಟುಕೊಳ್ಳಬೇಕು. ಬೇಸಿಗೆ ಸಂದರ್ಭದಲ್ಲಿ ಜನ-ಜಾನುವಾರುಗಳಿಗೆ ಯಾವುದೇ ಕಾರಣಕ್ಕೂ ನೀರಿನ ಸಮಸ್ಯೆಯಾಗದಂತೆ ನೋಡಿಕೊಳ್ಳಲು ಜಿಲ್ಲಾಡಳಿತ ಸದಾ ಸನ್ನದ್ಧವಾಗಿರಬೇಕು ಎಂದು ಜಿಲ್ಲಾ ಉಸ್ತುವಾರಿ ಸಚಿವರು ಅಧಿಕಾರಿಗಳಿಗೆ ಸ್ಪಷ್ಟ ನಿರ್ದೇಶನ ನೀಡಿದರು. ಮುಂದಿನ ಇಪ್ಪತ್ತು ದಿನಗಳವರೆಗೆ ನೀರು ಬಿಡುಗಡೆ ಸಂದರ್ಭದಲ್ಲಿ ಸಣ್ಣ ನೀರಾವರಿ ಇಲಾಖೆ ಸೇರಿದಂತೆ ವಿವಿಧ ಇಲಾಖೆಗಳೊಂದಿಗೆ ಸಮನ್ವಯತೆ ಸಾಧಿಸಲು ಜಿಲ್ಲಾಧಿಕಾರಿಗಳು ಸಂಬಂಧಿಸಿದ ಇಲಾಖೆಗಳೊಂದಿಗೆ ಸಮನ್ವಯ ಸಭೆ ನಡೆಸಿ, ಬೇಸಿಗೆಯಲ್ಲಿ ನೀರಿನ ಸಮಸ್ಯೆ ಉಲ್ಬಣಗೊಳ್ಳದಂತೆ ನೋಡಿಕೊಳ್ಳಬೇಕು ಎಂದರು.



"ಆಲಮಟ್ಟಿ ಜಲಾಶಯದ ಸ್ಟೋರೇಜ್ ನೋಡಿಕೊಂಡು ನೀರಿನ ಸಮರ್ಪಕ ನಿರ್ವಹಣೆ ಮಾಡಬೇಕು."

■ ಸಿ.ಎಸ್. ನಾಡಗೌಡ
ಮುದ್ದೇಬಿಹಾಳ ಶಾಸಕರು

## ಆಲಮಟ್ಟಿ & ನಾರಾಯಣಪುರ ಜಲಾಶಯದಲ್ಲಿ ನೀರಿನ ಲಭ್ಯತೆ



ಜಿಲ್ಲಾಧಿಕಾರಿ ಡಾ. ಆನಂದ ಕೆ. ಅವರು ಮಾತನಾಡಿ, ವಿಜಯಪುರ ಜಿಲ್ಲೆಯ ಆಲಮಟ್ಟಿ ಹಾಗೂ ನಾರಾಯಣಪುರ ಜಲಾಶಯದಲ್ಲಿ ಕಳೆದ ವರ್ಷ ಇದ್ದ ನೀರಿನ ಲಭ್ಯತೆ ಎರಡೂ ಜಲಾಶಯದಲ್ಲಿ ಇದೆ ಎಂದು ಮಾಹಿತಿ ನೀಡುತ್ತಿದ್ದಂತೆಯೇ ಮಧ್ಯೆ ಪ್ರವೇಶಿಸಿದ ಜಿಲ್ಲಾ ಉಸ್ತುವಾರಿ ಸಚಿವರು, ಆಗಸ್ಟ್ ತಿಂಗಳವರೆಗೆ ಕುಡಿಯುವ ನೀರಿನ ಲಭ್ಯತೆಯನ್ನು ಬಳಸಿಕೊಳ್ಳಬೇಕು ಎಂದರು. ಗ್ರಾಮೀಣ ಪ್ರದೇಶ 40 ಬಹುಹಳ್ಳಿ ಕುಡಿಯುವ ನೀರಿನ (ಎಂವಿಎಸ್) ಯೋಜನೆಗಳು ಸಮರ್ಪಕವಾಗಿ ನಡೆಯುತ್ತಿವೆ ಎಂದು ಜಿಲ್ಲಾಧಿಕಾರಿ ವಿವರಿಸಿದರು.



"ನಗರದ ಹಳೆಯ ಬೋರವೆಲ್ ಗಳು ಚಾಲ್ತಿಯಲ್ಲಿರುವಂತೆ ನೋಡಿಕೊಳ್ಳಬೇಕು. ಯಾವ ಯಾವ ವಾರ್ಡಿಗೆ ಎಷ್ಟು ನೀರು ಎಂಬುದಾಗಿ ಅಧಿ ಕಾರಿಗಳು ಶೆಡ್ಯೂಲ್ ಮಾಡಿ ಸಮರ್ಪಕವಾಗಿ ನೀರು ಪೂರೈಸಬೇಕು."

■ ಬಸನಗೌಡ ಪಾಟೀಲ, ಯತ್ನಾಳ
ವಿಜಯಪುರ ನಗರ ಶಾಸಕರು

## ಜಲಧಾರೆ ಯೋಜನೆ ಶೀಘ್ರ ಪೂರ್ಣಗೊಳಿಸಿ



ಬೇಸಿಗೆಯಲ್ಲೂ ಜಿಲ್ಲೆಯಲ್ಲಿ ನೀರಿನ ಶಾಶ್ವತ ಪರಿಹಾರ ಕಲ್ಪಿಸಲಿರುವ ಮಹತ್ವಾಕಾಂಕ್ಷೆಯ ಜಲಧಾರೆ ಯೋಜನೆಯನ್ನು ಯುದ್ಧೋಪಾದಿಯಲ್ಲಿ ಕೈಗೊಂಡು ಶೀಘ್ರದಲ್ಲಿ ಪೂರ್ಣಗೊಳಿಸಬೇಕು."

■ ಡಾ. ಎಂ.ಬಿ. ಪಾಟೀಲ
ವಿಜಯಪುರ ಜಿಲ್ಲಾ ಉಸ್ತುವಾರಿ ಸಚಿವರು

## ಭೂತನಾಳ ಕೆರೆಯಲ್ಲಿ ನೀರು ಸಂಗ್ರಹಿಸಿ

ಭೂತನಾಳ ಕೆರೆಗೆ ವಿಶೇಷವಾಗಿ ಬೇಸಿಗೆ ಸಂದರ್ಭದಲ್ಲಿ ನೀರು ಸಂಗ್ರಹಿಸಲು ಕ್ರಮ ಕೈಗೊಳ್ಳಬೇಕು ಎಂದು ಸಚಿವ ಎಂ.ಬಿ.ಪಾಟೀಲ ತಿಳಿಸಿದರು. ನಗರಕ್ಕೆ ನೀರಿನ ಯಾವುದೇ ತೊಂದರೆಯಾಗದ ಹಾಗೆ ನೀರು ನಿರ್ವಹಣೆ ಮಾಡಬೇಕು. ನಗರದ ಬಾವಿಗಳನ್ನು ಸ್ವಚ್ಛಗೊಳಿಸಿ, ಅನ್ಯ ಉದ್ದೇಶಗಳಿಗೆ ನೀರು ಬಳಸಬಹುದಾಗಿದೆ. 26 ಬಾವಿಗಳಿಗೆ ಸಿಎಸ್ ಆರ್ ಅನುದಾನದಲ್ಲಿ ಬಾವಿ ಸ್ವಚ್ಛಗೊಳಿಸಿ ಮೋಟಾರ್ ಅಳವಡಿಸಲಾಗಿದೆ. ತಾಜಬಾವಡಿ ನೀರೂ ಬಳಕೆಯಾಗುತ್ತಿದೆ. ಬೋರವೆಲ್ ಮರುಪೂರಣಗೊಳಿಸಿ ನೀರು ಬಳಸಿಕೊಳ್ಳಬಹುದು. ಬಾವಿ ನೀರನ್ನು ಪರ್ಯಾಯ ವ್ಯವಸ್ಥೆ ಮಾಡಿ,ಸ್ಥಳೀಯ ಸಂಸ್ಥೆಯಲ್ಲಿ ಸಮಸ್ಯೆ ಇರದಂತೆ ಮುಂಜಾಗ್ರತೆ ವಹಿಸಬೇಕು ಎಂದರು.

## ನಾಳೆ ಕೆರೆಗಳಿಗೆ ನೀರು

ಕೆರೆಗಳಿಗೆ ನೀರು ಹರಿಸುವ ಸಂದರ್ಭದಲ್ಲಿ ನಿಗಾವಹಿಸಿ ಕೊನೆಯ ಹಂತದವರೆಗೂ ನೀರು ತಲುವಂತೆ ನೋಡಿಕೊಳ್ಳಬೇಕು ಎಂದ ಜಿಲ್ಲಾ ಉಸ್ತುವಾರಿ ಸಚಿವ ಎಂ.ಬಿ. ಪಾಟೀಲರು, ಕೆರೆ ತುಂಬುವ ಶೆಡ್ಯೂಲ್ ಪ್ರಕಾರ ತುಂಬಿಸಬೇಕು. ಒಟ್ಟು 2.3 ಟಿಎಂಸಿ ನೀರು ನಾಳೆ ಹ-ರಿಸಲಾಗುವುದು ಎಂದರು.

ಮೊದಲು ಟೇಲ್ ಎಂಡ್ ನೀರು ತಲುಪುವಂತೆ ನಿರ್ವಹಣೆ ಮಾಡಿ, ಕುಡಿಯುವ ನೀರಿನ ಉದ್ದೇಶಕ್ಕೆ ನೀರು ಹರಿಸಲಾಗುತ್ತಿದೆ. ಅದೇ ಉದ್ದೇಶಕ್ಕೆ ಮಾತ್ರ ನೀರು ಸದ್ಬಳಕೆಯಾಗುವಂತೆ ನೋಡಿಕೊಳ್ಳಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದ ಸಚಿವರು, ಈ ವಿಷಯದಲ್ಲಿ ಪೊಲೀಸ್ ಇಲಾಖೆ, ಸಂಬಂಧಿಸಿದ ಇಲಾಖೆ ಸಮನ್ವಯತೆ ಸಾಧಿಸಬೇಕು ಎಂದರು.

## 2027 ಮಾರ್ಚ್ ವೇಳೆಗೆ ಹಂತ-2 ಪೂರ್ಣಗೊಳಿಸಿ

ಮಹತ್ವಕಾಂಕ್ಷೆಯ ಜಲಧಾರೆ ಹಂತ -1 ಹಾಗೂ ಹಂತ-2ರ ಯಾವುದೇ ಸಮಸ್ಯೆಗಳಿದ್ದರೂ ಅವುಗಳನ್ನು ನಿವಾರಿಸಿಕೊಂಡು ಬೇಗ ಕಾಮಗಾರಿ ಮಾಡಿಸಬೇಕು. ಅರಣ್ಯ ಇಲಾಖೆ ಈ ಯೋಜನೆಯಡಿಯಿರುವ ತೊಂದರೆ ಬಗೆಹರಿಸಬೇಕು. ಪೂರ್ಣಗೊಳಿಸಬೇಕು. 2027 ಮಾರ್ಚ್ ಒಳಗಾಗಿ ಪೂರ್ಣಗೊಳಿಸುವಂತೆ ಸಚಿವ ಎಂ.ಬಿ.ಪಾಟೀಲ ಅಧಿಕಾರಿಗಳಿಗೆ ಖಡಕ್ ಸೂಚನೆ ನೀಡಿದರು.

### ಜಿಲ್ಲೆಯ 26 ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ದೂರುಗಳು | ಸಿಎಐಆರ್ ಪೋರ್ಟ್ಲ್ ಬಲ ಮೂಲಕ ಮೊಬೈಲ್ಗಳ ಪತ್ತೆ | ಎಸ್ಪಿ ಲಕ್ಷ್ಮಣ ನಿಂಬರಗಿ ಸುದ್ದಿಗೋಷ್ಠಿ

# ವಿಜಯಪುರ ಪೊಲೀಸರ ಭರ್ಜರಿ ಕಾರ್ಯಾಚರಣೆ :340 ಮೊಬೈಲ್ ಜಪ್ತಿ!

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಜಿಲ್ಲೆಯಲ್ಲಿ ಸಿಇಐಆರ್ ಪೋರ್ಟ್ಲ್ ಬಲದ ಮೂಲಕ ಕಳ್ಳತನವಾಗಿರುವ ಮೊಬೈಲ್ ಪತ್ತೆ ಹಚ್ಚುವಲ್ಲಿ ಪೊಲೀಸರು ಯಶಸ್ವಿಯಾಗಿದ್ದು, ವಿವಿಧ ಮೊಬೈಲ್ ಕಳ್ಳತನ ಪ್ರಕರಣಕ್ಕೆ ಸಂಬಂಧಿಸಿದಂತೆ ಕಾರ್ಯಾಚರಣೆ ನಡೆಸಿ 340 ಮೊಬೈಲ್ಗಳನ್ನು ಜಪ್ತು ಮಾಡುವಲ್ಲಿ ಯಶಸ್ವಿಯಾಗಿದ್ದಾರೆ. ಜಿಲ್ಲೆಯ 26 ಪೊಲೀಸ್ ಠಾಣೆಗಳಲ್ಲಿ ದಾಖಲಾಗಿದ್ದ ದೂರುಗಳನ್ನು ಆಧರಿಸಿ ಮೊಬೈಲ್ ಪತ್ತೆ ಹಚ್ಚಲಾಗಿದೆ ಎಂದು ಜಿಲ್ಲಾ ಪೊಲೀಸ್ ಅಧೀಕ್ಷಕ ಲಕ್ಷ್ಮಣ ನಿಂಬರಗಿ ಹೇಳಿದರು.

ಈ ಕುರಿತು ನಗರದಲ್ಲಿ ಶುಕ್ರವಾರ ಸುದ್ದಿಗೋಷ್ಠಿಯಲ್ಲಿ ವಿವರಣೆ ನೀಡಿದ ಅವರು, ಮೊಬೈಲ್ ಕಳ್ಳತನ ಪ್ರಕರಣಗಳು ಇತ್ತೀಚಿಗೆ ಹೆಚ್ಚುತ್ತಿದ್ದು, ಇದನ್ನು ತಪ್ಪಿಸುವ ನಿಟ್ಟಿನಲ್ಲಿ ಸೆಂಟ್ರಲ್ ಇಕ್ಯೂಪಮೆಂಟ್ ಐಡೆಂಟಿಟಿ ರಜಿಸ್ಟರ್ ದೂರ ಸಂಪರ್ಕ ಇಲಾಖೆ ನಿರ್ಮಿಸಿದ ಡಿಜಿಟಲ್ ವ್ಯವಸ್ಥೆಯಾಗಿದ್ದು, ಮೊಬೈಲ್ ಕಳೆದು ಹೋದಾಗ ಟ್ರ್ಯಾಕ್, ಬ್ಲಾಕ್ ಹಾಗೂ ರಿಕವರಿ ಮಾಡಲು ಸಹಾಯಕವಾಗಿದೆ, ಈ ತಂತ್ರಾಂಶ ಆಧರಿಸಿ 340 ಮೊಬೈಲ್ಗಳನ್ನು ವಿವಿಧ ರಾಜ್ಯಗಳಿಂದ ಪತ್ತೆ ಹಚ್ಚಿ ಅದನ್ನು ಸಂಬಂಧಿಸಿದವ-ರಿಗೆ ಹಸ್ತಾಂತರಿಸಲಾಗಿದೆ ಎಂದು ವಿವರಿಸಿದರು.

ಮೊಬೈಲ್ ಬಳಕೆದಾರರು ತಮ್ಮ ಸಾಧನವನ್ನು ಐಎಂಇಐ ಸಂಖ್ಯೆಯ ಮೂಲಕ ಟ್ರ್ಯಾಕ್ ಮಾಡಲು ಸಹಾಯಕವಾಗಿದ್ದು, ಮೊಬೈಲ್ ಕಳ್ಳತನ ಪ್ರಕರಣವನ್ನು ಪತ್ತೆ ಹಚ್ಚುವಲ್ಲಿ ಅನುಪಮ ಪಾತ್ರ ವಹಿಸಿದೆ ಎಂದು ವಿವರಿಸಿದರು.

ಎಎಸ್ಪಿ ರಾಮನಗೌಡ ಹಟ್ಟಿ, ಡಿವೈ-ಎಸ್ಪಿಗಳಾದ ಸುನೀಲ್ ಕಾಂಬಳೆ, ಟಿ.ಎಸ್. ಸುಲ್ಪಿ, ಸಿಪಿಐಗಳಾದ ಮಲ್ಲಯ್ಯ ಮಠಪತಿ ಮೊದಲಾದವರು ಪತ್ರಿಕಾಗೋಷ್ಠಿಯಲ್ಲಿ ಪಾಲ್ಗೊಂಡಿದ್ದರು. ಬಾಕ್ಸ್



### ಪೆರೋಲ್ ರಜೆ ಮೇಲೆ ಹೋಗಿ ತಲೆ ಮರೆಸಿಕೊಂಡ ಕೈದಿ ವಶಕ್ಕೆ

ಪೆರೋಲ್ ರಜೆ ಮೇಲೆ ಜೈಲಿನಿಂದ ಹೊರಗೆ ಬಂದು ಕಳೆದ 2 ವರ್ಷ 10 ತಿಂಗಳಿನಿಂದ ನಾಪತ್ತೆಯಾಗಿದ್ದ ಕೈದಿ ಮೈಸೂರಿನಲ್ಲಿ ಇರುವ ಖಚಿತ ಮಾಹಿತಿ ಆಧರಿಸಿ ಆ ಕೈದಿಯನ್ನು ಬಂಧಿಸುವಲ್ಲಿ ವಿಜಯಪುರ ಪೊಲೀಸರು ಯಶಸ್ವಿಯಾಗಿದ್ದಾರೆ.

ಬಂಧಿತನಾಗಿರುವ ಸಜಾ ಬಂಧಿಯನ್ನು ಹಾವೇರಿ ಜಿಲ್ಲೆಯ ಶಿಗ್ಗಾಂವಿಯ ಕಿರಣಕುಮಾರ ಆನಂದಯ್ಯ ಹಿರೇಮಠ (30) ಎಂದು ಗುರುತಿಸಲಾಗಿದೆ. ಈ ಸಜಾ ಬಂಧಿಯ ಮೇಲೆ ಬಾದಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣಕ್ಕೆ ಸಂಬಂಧಿಸಿದಂತೆ ಬಾಗಲಕೋಟೆ ಜಿಲ್ಲಾ ಪ್ರಧಾನ ಮತ್ತು ಸತ್ರ ನ್ಯಾಯಾಲಯ ಈ ಪ್ರಕರಣದ ವಿಚಾರಣೆ ನಡೆಸಿ ಜೀವಾವಧಿ ಶಿಕ್ಷೆಯನ್ನು ಪ್ರಕಟಿಸಿ ಕಳೆದ 2017 ರ ಡಿಸೆಂಬರ್ 3 ರಂದು ತೀರ್ಪು ಪ್ರಕಟಿಸಿತ್ತು. ಅದರನ್ವಯ ಈ ಬಂಧಿಯನ್ನು ಬಾಗಲಕೋಟೆ ಜಿಲ್ಲಾ ಕೇಂದ್ರ ಕಾರಾಗೃಹದಲ್ಲಿ ಇರಿಸಲಾಗಿತ್ತು. ನಂತರ ಆತನನ್ನು ಜಿಲ್ಲಾ ಕೇಂದ್ರ ಕಾರಾಗೃಹಕ್ಕೆ ಹಸ್ತಾಂತರಿಸಲಾಗಿತ್ತು. ಕಳೆದ 2023 ರ ಆಗಸ್ಟ್ 11 ರಿಂದ 2023 ರ ಆಗಸ್ಟ್ 23 ರವರೆಗೆ 13 ದಿನಗಳ ಕಾಲ ಪೆರೋಜ್ ರಜೆ ಪಡೆದು ಕೇಂದ್ರ ಕಾರಾಗೃಹದಿಂದ ತೆರಳಿದ್ದ, ಆದರೆ




ಪೆರೋಲ್ ರಜೆ ಅವಧಿ ಮುಗಿದರೂ ವಾಪಾಸ್ಸಾಗದೇ ತಲೆ ಮರೆಸಿಕೊಂಡಿದ್ದ, ಈ ಹಿನ್ನೆಲೆಯಲ್ಲಿ ಕೇಂದ್ರ ಕಾರಾಗೃಹದ ಉಪಾಧೀಕ್ಷಕ ಡಾ.ಎಚ್.ಜಿ. ಮಂಜುನಾಥ ಆದ-ರ್ಶ ನಗರ ಪೊಲೀಸ್ ಠಾಣೆಗೆ ದೂರು ದಾಖಲಿಸಿದ್ದರು.

ಈ ಪ್ರಕರಣ ದಾಖಲಿಸಿಕೊಂಡು ನಿರಂತರವಾಗಿ ಆರೋಪಿ ಪತ್ತೆ ಜಾಲ ಬೀಸಿದ್ದ ಪೊಲೀಸರು ಆರೋಪಿ ಮೈಸೂರಿನಲ್ಲಿರುವ ಖಚಿತ ಮಾಹಿತಿ ಲಭ್ಯವಾದ ಹಿನ್ನೆಲೆಯಲ್ಲಿ ಆದರ್ಶ ನಗರ ಪೊಲೀಸ್ರ ತಂಡ ಮೈಸೂರಿಗೆ ತೆರಳಿ ಸಜಾ ಬಂಧಿಯನ್ನು ಬಂಧಿಸುವಲ್ಲಿ ಯಶಸ್ವಿಯಾಗಿ ನ್ಯಾಯಾಲಯದ ಮೇಲೆ ಹಾಜರು ಪಡಿಸಲಾಗಿದೆ ಎಂದು ವಿವರಿಸಿದರು.

### ರಾಜ್ಯದಲ್ಲೇ ದೊಡ್ಡ ಮಟ್ಟದ ಅಕ್ರಮ ಬಯಲು : ಉನ್ನತ ಮಟ್ಟದ ತನಿಖಾ ತಂಡ ರಚಿಸಿತಪ್ಪಿತಸ್ಥರ ಮೇಲೆ ತ್ವರಿತವಾಗಿ ಕ್ರಮಕೈಗೊಳ್ಳಲು ಸಂಸದ ರಮೇಶ ಜಿಗಜಿಣಗಿ ಆಗ್ರಹ

# ಶಾಲೆ ಮಾನ್ಯತೆ-ನವೀಕರಣದ ಹೆಸರಲ್ಲಿ ಕೋಟ್ಯಂತರ ರೂ. ಲೂಟಿ!

■ ಉದಯರಶ್ಮಿ ದಿನಪತ್ರಿಕೆ



ವಿಜಯಪುರ: 'ಅನುದಾನಿತ, ಅನುದಾನ ರಹಿತ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಮಾನ್ಯತೆ ನವೀಕರಣ ಹಾಗೂ ಪ್ರಥಮ ಮಾನ್ಯತೆ ನೀಡುವಲ್ಲಿ ಕೋಟ್ಯಂತರ ರೂಪಾಯಿ ಅಕ್ರಮ ನಡೆದಿರುವುದು ಬೆಳಕಿಗೆ ಬಂದರೂ ಈವರೆಗೆ ಕಠಿಣ ಕ್ರಮ ಕೈಗೊಳ್ಳದಿರುವ ಕಾಂಗ್ರೆಸ್ ಸರ್ಕಾರದ ಜೀವಂತಿ-ಕೆ ಬಗ್ಗೆ ಅನುಮಾನ ಮೂಡುತ್ತಿದೆ ಎಂದು ಸಂಸದ ರಮೇಶ ಜಿಗಜಿಣಗಿ ಆರೋಪಿಸಿದ್ದಾರೆ.

ಈ ಕುರಿತು ಶುಕ್ರವಾರ ಪ್ರಕಟಣೆಯಲ್ಲಿ ತಿಳಿಸಿದ ಅವರು, ಜಿಲ್ಲಾ ಸಾರ್ವಜನಿಕ ಶಿಕ್ಷಣ ಇಲಾಖೆಯಲ್ಲಿ ನಡೆದಿರುವ ಅಕ್ರಮದ ಕುರಿತು ರಾಜ್ಯಮಟ್ಟದಲ್ಲಿ ಚರ್ಚೆಯಾಗುತ್ತಿದ್ದರೂ ಈವರೆಗೆ ಸಂಬಂಧಿಸಿದ ಅಧಿಕಾರಿ ಹಾಗೂ ಸಿಬ್ಬಂದಿ ಮೇಲೆ ಕಠಿಣ ಕ್ರಮ ಕೈಗೊಳ್ಳಲಾಗಿಲ್ಲ. ಕೇವಲ 14 ಸಿಬ್ಬಂದಿಯನ್ನು ಅನ್ಯ ಕಡೆ ನಿಯೋಜನೆಗೊಳಿಸಿದ್ದು ಬಿಟ್ಟರೆ ಪ್ರಕರಣದ ಸಂಪೂರ್ಣ ತನಿಖೆ ಆದ-ರಿಸಿ ಕಠಿಣ ಕ್ರಮ ಕೈಗೊಳ್ಳಲು ಹಿಂದೇಟು ಹಾಕುತ್ತಿರುವುದನ್ನು ಗಮನಿಸಿದರೆ ಅಕ್ರಮದಲ್ಲಿ ರಾಜ್ಯ ಸರ್ಕಾರದ ಕೈವಾಡ ಇಲ್ಲದಿರಲು ಸಾಧ್ಯವಿಲ್ಲ.

ರಾಜ್ಯದಲ್ಲೇ ಅತೀ ಹೆಚ್ಚು ಶಾಲೆಗಳಿಗೆ ಮಾನ್ಯತೆ ನವೀಕರಣ ಹಾಗೂ ಪ್ರಥಮ ಮಾನ್ಯತೆ ನೀಡಲಾಗಿದೆ. ಈ ಪ್ರಕ್ರಿಯೆಯಲ್ಲಿ ತಮ್ಮ ಲಾಗಿನ್ ದುರ್ಬಳಕೆಯಾಗಿದೆ ಎಂದು ಡಿಡಿಪಿಐ ಫೆ.25ರಂದು ಎಫ್ಐಆರ್ ದಾಖಲಿಸಿದ್ದಾರೆ. ಅದರಲ್ಲಿ ತಮಗೇ ಗೊತ್ತಿಲ್ಲದಂತೆ ತಮ್ಮ ಲಾಗಿನ್ ಬಳಸಿ ಶಾಲೆಗಳಿಗೆ ನವೀಕರಣ ಹಾಗೂ ಪ್ರಥಮ ಮಾನ್ಯತೆ ನೀಡಲಾಗಿದೆ ಎಂದು ಉಲ್ಲೇಖಿಸಿದ್ದಾರೆ. ಒಟ್ಟು 58 ಶಾಲೆಗಳ ನವೀಕರಣ ಹಾಗೂ ಪ್ರಥಮ ಮಾನ್ಯತೆಯಲ್ಲಿ ಅಕ್ರಮ ನಡೆದಿರುವುದಾಗಿ ತಿಳಿಸಿದ್ದಾರೆ. ಈ 58 ಶಾಲೆಗಳ ಪೈಕಿ ಬಹುತೇಕ ಶಾಲೆಗಳಿಗೆ ಅನುಮತಿ ನೀಡುವಂತೆ ಕಾಂಗ್ರೆಸ್ ಶಾಸಕರೇ ಪತ್ರ ಬರೆದಿದ್ದಾರೆ. ಹಾಗಾದರೆ ಇದರಲ್ಲಿ ಶಾಸಕರ ಕೈವಾಡ ಇಲ್ಲದಿರಲು ಹೇಗೆ ಸಾಧ್ಯ? ಅವರನ್ನು ಈವರೆಗೆ ತನಿಖೆಗೆ ಒಳಪಡಿಸಿಲ್ಲವೇಕೆ?

ಈ 58 ಶಾಲೆಗಳ ಹೊರತಾಗಿಯೂ 200ಕ್ಕೂ ಅಧಿಕ ಶಾಲೆಗಳಿಗೆ ಪ್ರಥಮ ಮಾನ್ಯತೆ ಹಾಗೂ ಮಾನ್ಯತೆ ನವೀಕರಿಸಲಾಗಿದೆ. ಈ ಶಾಲೆಗಳಲ್ಲಿ ಬಹುತೇಕ ಶಾಲೆಗಳು ಅನರ್ಹವಾಗಿವೆ. ಅಲ್ಲದೇ, ಮಾನ್ಯತೆ ನವೀಕರಣ ಮತ್ತು ಪ್ರಥಮ ಮಾನ್ಯತೆಯಲ್ಲಿಯೂ ನಿಯಮ ಉಲ್ಲಂಘಿಸಲಾಗಿದೆ. ಜಿಲ್ಲಾ ಪಂಚಾಯಿತಿ ಸಿಇಒ ರಚಿಸಿ ಸಮಿತಿ ನಡೆಸಿದ ತನಿಖೆಯಲ್ಲಿಯೇ ಇಂಥದ್ದೊಂದು ಅಂಶ ಬಯಲಾದ ಬಗ್ಗೆ ಮಾಧ್ಯಮಗಳಲ್ಲಿಯೂ ವರದಿಯಾಗಿದೆ. ಇನ್ನೊಂದೆಡೆ ಈಗಿರುವ ಮತ್ತು ಹಿಂದಿನ ಅಧಿಕಾರಿ ಮತ್ತು ಸಿಬ್ಬಂದಿ ನಿಯಮ ಉಲ್ಲಂಘಿಸಿರುವುದು, ಕರ್ತವ್ಯ ಲೋಪ ಎಸಗಿರುವ ಬಗ್ಗೆ ವರದಿಯಾದರೂ ಸಮಗ್ರ ತನಿಖೆ ನಡೆಸಿ ತಪ್ಪಿತಸ್ಥರ ಮೇಲೆ ಕಠಿಣ ಕ್ರಮ ಕೈಗೊಳ್ಳದಿರುವುದನ್ನು ಗಮನಿಸಿದರೆ ಇದರಲ್ಲಿ ಕೆಳ ಹಂತದಿಂದ ಮೇಲಿನ ಹಂತದವರೆಗಿನ ಎಲ್ಲ ಅಧಿಕಾರಿಗಳು ಮತ್ತು ಆಡಳಿತ ಪಕ್ಷದ ನಾಯಕರ ಕೈವಾಡ ಇರುವುದು ಗೋಚರಿಸುತ್ತಿದೆ.

ಕೂಡಲೇ ರಾಜ್ಯ ಸರ್ಕಾರ ಈ ಕುರಿತು ಉನ್ನತ ಮಟ್ಟದ ತನಿಖಾ ತಂಡ ರಚಿಸಬೇಕು. ಈಗಿರುವ ಅಧಿಕಾರಿ ಹಾಗೂ ಸಿಬ್ಬಂದಿಯನ್ನು ತಾತ್ಕಾಲಿಕವಾಗಿ ಅಮಾನತ್ತಿನಲ್ಲಿಟ್ಟು ಸಮಗ್ರ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳುವ ಮೂಲಕ ತಮ್ಮ ಪ್ರಾಮಾಣಿಕತೆ, ಆಡಳಿತದಲ್ಲಿನ ಪಾರದರ್ಶಕತೆ ಹಾಗೂ ಜೀವಂತಿಕೆಯನ್ನು ಸಾಬೀತುಪಡಿಸಬೇಕು.

ಈ ಕುರಿತು ಮುಖ್ಯಮಂತ್ರಿ ಸಿದ್ದರಾಮಯ್ಯ, ಶಿಕ್ಷಣ ಸಚಿವ ಮಧು ಬಂಗಾರಪ್ಪ ಹಾಗೂ ರಾಜ್ಯಪಾಲರಿಗೂ ಪತ್ರ ಬರೆಯುತ್ತಿರುವುದಾಗಿ ಸಂಸದ ರಮೇಶ ಜಿಗಜಿಣಗಿ ತಿಳಿಸಿದ್ದಾರೆ.

# ಕಬ್ಬಡ್ಡಿ ಪಂದ್ಯಾವಳಿ: ಬಂಜಾರಾ ಕಾಲೇಜಿಗೆ ಪ್ರಥಮ ಸ್ಥಾನ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಕ್ರೀಡೆಗಳು ದೈಹಿಕ, ಮಾನಸಿಕ ಆರೋಗ್ಯ, ಏಕಾಗ್ರತೆ, ಶಿಸ್ತು ಮತ್ತು ವ್ಯಕ್ತಿತ್ವ ವಿಕಸನಕ್ಕೆ ಅತ್ಯಗತ್ಯ. ಸದೃಢ ದೇಹದಲ್ಲಿ ಆರೋಗ್ಯಕರ ಮನಸ್ಸು ಮೂಡಲು ಕ್ರೀಡೆಗಳು ಸಹಕಾರಿ. ಕ್ರೀಡೆಗಳು ತಂಡದ ಕೆಲಸ, ನಾಯಕತ್ವ ಗುಣ, ಪರಸ್ಪರ ಸಹಕಾರ ಮತ್ತು ಕ್ರೀಡಾ ಮನೋಭಾವದಂತಹ ಗುಣಗಳನ್ನು ಬೆಳೆಸಲು ಸಹಾಯ ಮಾಡುತ್ತವೆ ಎಂದು ಬಸವನ ಬಾಗೇವಾಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಪ್ರಾಚಾರ್ಯ ಡಾ. ಎನ್.ಬಿ.ಹೊಸಮನಿ ಅಭಿಪ್ರಾಯಪಟ್ಟರು.

ಅವರು ನಗರದ ನವ ಭಾಗದಲ್ಲಿರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಜರುಗಿದ ರಾಣಿ ಚನ್ನಮ್ಮ ವಿಶ್ವವಿದ್ಯಾಲಯದ ಎರಡನೇಯ ವಲಯದ ಅಂತರ ಮಹಾವಿದ್ಯಾಲಯಗಳ ಪುರುಷರ ಕಬ್ಬಡ್ಡಿ ಪಂದ್ಯಾವಳಿಯ ಪಾರಿತೋಷಕ ವಿತರಣಾ ಸಮಾರಂಭದಲ್ಲಿ ಮಾತನಾಡುತ್ತಿದ್ದರು.

ಕ್ರೀಡಾಪಟುಗಳು ಸೋಲು-ಗೆಲುವನ್ನು ಸಮಾನವಾಗಿ ಸ್ವೀಕರಿಸಬೇಕು. ಸಮಯೋಚಿತ ಯೋಜನೆ, ಚಾಣಾಕ್ಷತನ, ಕ್ರೀಡಾ ಸಾಮರ್ಥ್ಯದೊಂದಿಗೆ ಎದುರಾಳಿ ತಂಡದ ಅಸಮರ್ಥ-ರ್ತೆಯನ್ನು ಗುರುತಿಸಿ ತನ್ಮೂಲಕ ಪರಸ್ಪರ ಒಗ್ಗಟ್ಟಿನಿಂದ ಕಬ್ಬಡ್ಡಿ ಆಟವಾಡಿದಾಗ ಮಾತ್ರ ಗೆಲುವು ಸಾಧ್ಯ ಎಂದರು.

ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಎ.ಐ.ಹಂಜಗಿ ಮಾತನಾಡಿ, ಕ್ರೀಡಾಪಟುಗಳು ಸೋತಾಗ ಕುಗ್ಗದೇ ಗೆದ್ದಾಗ ಹಿಗ್ಗದೇ ಸದಾ ಕ್ರೀಡಾ ಸ್ಪೂರ್ತಿಯಿಂದ ತಮ್ಮ ಆಟವನ್ನು ಪ್ರದರ್ಶಿಸಬೇಕು. ಕ್ರೀಡಾಪಟುಗಳ ರಾಷ್ಟ್ರೀಯ ಮಟ್ಟದ ಸಾಧನೆಗೆ ಸೂಕ್ತ ಉದ್ಯೋ ಗಾವಕಾಶ ದೊರೆಯುತ್ತವೆ. ಆ ನಿಟ್ಟಿನಲ್ಲಿ ತಾವೆಲ್ಲರೂ ಸಾಧನೆ ತೋರಿ ಉನ್ನತ ಹುದ್ದೆಗಳನ್ನು ಬಾಚಿಕೊಳ್ಳಬೇಕು ಎಂದರು.

ಆಯೇರಿಯ ಶ್ರೀ ಸಂ-ಜಯ ಜಾಧವ, ಐ.ಕ್ಯೂ.ಎ.ಸಿ ಸಂಚಾಲಕ ಪ್ರೊ. ಆರ್.ಎಸ್. ಕುರಿ, ದೈಹಿಕ ಶಿಕ್ಷಣ ನಿರ್ದೇಶಕ ಪ್ರೊ. ಸಂಗಮೇಶ ಗುರವ, ಕ್ರೀಡಾ ನಿರ್ದೇಶಕಿ ಶ್ರೀಮತಿ ರೇಣುಕಾ ಅಂಬಲಿ ಇನ್ನಿತರರು ವೇದಿಕೆಯ ಮೇಲಿದ್ದರು. ಅಂತಿ ಮವಾಗಿ ಆತಿಥೇಯ ಸರ್ಕಾರಿ ಪದವಿ ಕಾಲೇಜು, ವಿಜಯಪುರ ತಂಡ ಹಾಗೂ ಬಂಜಾರಾ ಪದವಿ ಕಾಲೇಜು ತಂಡಗಳ ನಡುವೆ ನಡೆದ ಫೈನಲ್ ಪಂದ್ಯವು ಬಹಳ ರೋಚಕವಾಗಿತ್ತು. ಸಮಬಲದ ಹೋರಾಟ ನಡೆದರೂ ಅಂತಿಮವಾಗಿ ಬಂಜಾರಾ ಕಾಲೇಜು ತಂಡ ಗೆಲುವು ಸಾಧಿಸಿ ಪಂದ್ಯಾವಳಿಯಲ್ಲಿ ಪ್ರಥಮ ಸ್ಥಾನ ಪಡೆಯಿತು ಮತ್ತು ಆತಿಥೇಯ ಸರ್ಕಾರಿ ಪದವಿ ಕಾಲೇಜು ತಂಡ ದ್ವಿತೀಯ ಸ್ಥಾನ ಪಡೆಯಿತು. ಕಬ್ಬಡ್ಡಿ ಪಂದ್ಯಾವಳಿಯಲ್ಲಿ ಒಟ್ಟು 6 ತಂಡಗಳು ಭಾಗವಹಿಸಿದ್ದವು.

ಕಾರ್ಯಕ್ರಮದಲ್ಲಿ ಡಾ. ಚಿದಾನಂದ ಆನೂರ, ಡಾ. ಸುನೀಲ ತೋಂಟಾಪೂರ, ಪ್ರೊ. ಎಂ.ಎಸ್.ಖೊದ್ನಾಪೂರ, ಪ್ರೊ. ಸುನೀಲ ಹತ್ತಿ, ಸರ್ಕಾರಿ ನೌಕರ ಸಂಘದ ನಿರ್ದೇಶಕರ ಡಾ. ಚಂದ್ರಕಾಂತ.ಬಿ, ಡಾ. ದೇವೇಂದ್ರಗೌಡ, ಪ್ರೊ. ಸಿದ್ರಾಮಯರನಾಳ, ಡಾ. ರಮೇಶ ತೇಲಿ, ನವೀನ ಬಿರಾದಾರ, ಯು.ಬಿ.ಮುಜಾವರ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.



# "ಮಧುರಚೆನ್ನ" ಏಕವ್ಯಕ್ತಿ ನಾಟಕ ಯಶಸ್ವಿ ಪ್ರದರ್ಶನ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: ಪ್ರತಿಷ್ಠಿತ ಬಿ.ಎಲ್.ಡಿ.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ), ಜಮಖಂಡಿಯಲ್ಲಿ ನಾಟಕ ಮತ್ತು ರಂಗಭೂಮಿ ಕಲೆ ವಿಭಾಗದ ಅಡಿಯಲ್ಲಿ ವಿಶೇಷ ಸಾಂಸ್ಕೃತಿಕ ಕಾರ್ಯಕ್ರಮವಾಗಿ "ಮಧುರಚೆನ್ನ" ಕುರಿತ ಏಕವ್ಯಕ್ತಿ ನಾಟಕ ಪ್ರದರ್ಶನ ಭರ್ಜರಿಯಾಗಿ ನಡೆಯಿತು. ಮೈಸೂರಿನ ಕವಿತಾ ಕಲಾ ತಂಡವು 20ನೇ ಶತಮಾನದ ಪ್ರಸಿದ್ಧ ಕವಿ ಮಧುರಚೆನ್ನ ಅವರ ಜೀವನ ಮತ್ತು ಸಾಹಿತ್ಯ ಸಾಧನೆಯನ್ನು ಆಧರಿಸಿದ ಈ ನಾಟಕವನ್ನು ಅತ್ಯಂತ ಮನೋಜ್ಞವಾಗಿ ಪ್ರದರ್ಶಿಸಿತು. ನಾಟಕದ ಪ್ರಸ್ತುತಿಯನ್ನು ಮಧುರಚೆನ್ನ ಅವರ ಮೊಮ್ಮಗನಾದ ಜಗದೇವ ಗಲಗಲಿ ಅವರು ಭಾವಪೂರ್ಣವಾಗಿ ನಿರ್ವಹಿಸಿ ಪ್ರೇಕ್ಷಕರ ಮನತನಿಸಿತು. ಈ ನಾಟಕದ ರಚನೆ ಮತ್ತು ನಿರ್ದೇಶನವನ್ನು ಗಣೇಶ ಅಮಿನಗಡ ಅವರು ಸಮರ್ಥವಾಗಿ ಮಾಡಿದ್ದು, ಸಂಗೀತ ಸೇವೆಯನ್ನು ಬಿ.ಆರ್. ಬನಸೋಡೆ ಅವರು ನೀಡಿದರು. ನಾಟಕದ ಪ್ರತಿಯೊಂದು ಅಂಗವೂ ಪ್ರೇಕ್ಷಕರಿಗೆ ಆಕರ್ಷಕ ಅನುಭವವನ್ನು ನೀಡಿತು.

# ಪಿಯುಸಿ: ತುಪ್ಪದ ಸಹೋದರಿಯರ ಅತ್ಯುತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ





ಕೊಲ್ಹಾರ: ಸಾಧನೆಗೆ ಬಡತನ, ಸೌಲಭ್ಯಗಳ ಕೊರತೆ ಅಥವಾ ಗ್ರಾಮೀಣ ಹಿನ್ನೆಲೆ ಎಂದಿಗೂ ಅಡ್ಡಿಯಾಗುವುದಿಲ್ಲ ಎಂಬುದನ್ನು ತುಪ್ಪದ ಮನೆತನದ ಇಬ್ಬರು ಪ್ರತಿಭಾವಂತ ಪುತ್ರಿಯರು ದೃಢಪಡಿಸಿದ್ದಾರೆ. ಸ್ಫೂರ್ತಿ ಪರಸುರಾಮ ತುಪ್ಪದ ಮತ್ತು ತೇಜಶ್ವಿನಿ ಈರಣ್ಣ ತುಪ್ಪದ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಅತ್ಯುತ್ತಮ ಅಂಕಗಳನ್ನು ಗಳಿಸುವ ಮೂಲಕ ತಮ್ಮ ಕುಟುಂಬಕ್ಕೂ, ಜಿಲ್ಲೆಗೂ ಹೆಮ್ಮೆ ತಂದಿದ್ದಾರೆ.

ವಿಜ್ಞಾನ ಕ್ಷೇತ್ರದಲ್ಲಿ ಸ್ಫೂರ್ತಿಯ ಶ್ರೇಷ್ಠತೆ ಬಸವನ ಬಾಗೇವಾಡಿ ತಾಲೂಕಿನ ನಿವಾಸಿ ಪರಸುರಾಮ ತುಪ್ಪದ ಅವರ ಪುತ್ರಿ ಸ್ಫೂರ್ತಿ, ಮಂಗಳೂರಿನ ಪ್ರತಿಷ್ಠಿತ ಎಕ್ಸ್‌ಪರ್ಟ್ ಪಿಯು ಕಾಲೇಜಿನಲ್ಲಿ ವಿಜ್ಞಾನ ವಿಭಾಗದಲ್ಲಿ ಓದುತ್ತಾ 600 ಅಂಕಗಳಿಗೆ 574 ಅಂಕಗಳನ್ನು (95.67%) ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ. ಕಠಿಣವೆನಿಸುವ ವಿಷಯಗಳನ್ನು ಆತ್ಮವಿಶ್ವಾಸ ಮತ್ತು ಶ್ರಮದ ಮೂಲಕ ಜಯಿಸಿರುವ ಸ್ಫೂರ್ತಿ, ವೈದ್ಯಕೀಯ ಅಥವಾ ಎಂಜಿನಿಯರಿಂಗ್ ಕ್ಷೇತ್ರದಲ್ಲಿ ಉನ್ನತ ಸಾಧನೆ ಮಾಡುವ ಕನಸು ಹೊಂದಿದ್ದಾರೆ.

ಅಹೋರಾತ್ರಿ ಪರಿಶ್ರಮ, ನಿಯಮಿತ ಅಭ್ಯಾಸ ಮತ್ತು ಗುರುಗಳ ಮಾರ್ಗದರ್ಶನವೇ ನನ್ನ ಯಶಸ್ಸಿನ ಗುಟ್ಟು ಎಂದು ಸ್ಫೂರ್ತಿ ಹೇಳುತ್ತಾರೆ. ತನ್ನ ಸಾಧನೆಯನ್ನು ಪೋಷಕರು ಹಾಗೂ ಶಿಕ್ಷಕ–ರಿಗೆ ಅರ್ಪಿಸುವ ಮೂಲಕ ವಿನಯವನ್ನೂ ತೋ–ರಿಸಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ತೇಜಶ್ವಿನಿಯ ಮೆರುಗು

ಕೊಲ್ಹಾರ ನಿವಾಸಿ ಈರಣ್ಣ ತುಪ್ಪದ ಅವರ ಪುತ್ರಿ ತೇಜಶ್ವಿನಿ, ಬೀಳಗಿಯ ಸ್ವಾಮಿ ವಿವೇಕಾನಂದ ಕಾಲೇಜಿನಲ್ಲಿ ವಾಣಿಜ್ಯ ವಿಭಾಗದಲ್ಲಿ 600 ಅಂಕಗಳಿಗೆ 560 ಅಂಕಗಳನ್ನು (93.33%) ಗಳಿಸಿ ಸಾಧನೆ ಮಾಡಿದ್ದಾರೆ. ಗ್ರಾಮೀಣ ಪ್ರದೇಶದಲ್ಲಿದ್ದರೂ ಅವಕಾಶಗಳನ್ನು ಸಮರ್ಪಕವಾಗಿ ಬಳಸಿಕೊಂಡು ತಮ್ಮ ಪ್ರತಿಭೆಯನ್ನು ಸಾಬೀತು ಪಡಿಸಿದ್ದಾರೆ.

ಶ್ರದ್ಧೆ, ಶಿಸ್ತು ಮತ್ತು ಸ್ಪಷ್ಟ ಗುರಿಯೇ ನನ್ನ ಸಾಧನೆಯ ಮೂಲ ಎಂದು ತೇಜಶ್ವಿನಿ ಅಭಿಪ್ರಾಯಪಟ್ಟಿದ್ದಾರೆ. ಭವಿಷ್ಯದಲ್ಲಿ ವಾಣಿಜ್ಯ ಕ್ಷೇತ್ರದಲ್ಲಿ ಉನ್ನತ ಹುದ್ದೆ ಸಾಧಿಸುವ ಆಶಯ ವ್ಯಕ್ತಪಡಿಸಿದ್ದಾಳೆ.

## ಒಂದೇ ಕುಟುಂಬ - ಎರಡು ಶಿಖರಗಳು

**ಒಂದೇ ಮನೆತನದ ಇಬ್ಬರು ಪುತ್ರಿಯರು ಬೇರೆ ಬೇರೆ ನಗರಗಳಲ್ಲಿ, ಬೇರೆ ಬೇರೆ ವಿಷಯಗಳಲ್ಲಿ ವಿದ್ಯಾಭ್ಯಾಸ ಮಾಡಿದರೂ ಅಂತಿಮ ಫಲಿತಾಂಶದಲ್ಲಿ ಎರಡೂ ಶಿಖರ ಸಾಧಿಸಿದ್ದಾರೆ. ಇದು ಕುಟುಂಬದ ಏಕತೆ, ಪೋಷಕರ ಬೆಂಬಲ ಮತ್ತು ಮಕ್ಕಳ ಸಂಕಲ್ಪದ ಸಂಕೇತವಾಗಿದೆ.**

**"ನಮ್ಮ ಮಕ್ಕಳ ಸಾಧನೆ ನಮಗೆ ಅತ್ಯಂತ ಹೆಮ್ಮೆಯ ವಿಷಯ. ಅವರು ಇನ್ನಷ್ಟು ಎತ್ತರಕ್ಕೆ ಬೆಳೆಯಲಿ ಎಂಬುದು ನಮ್ಮ ಆಶಯ" ಎಂದು ಪೋಷಕರು ಸಂತಸ ವ್ಯಕ್ತಪಡಿಸಿದ್ದಾರೆ.**

**ಗ್ರಾಮೀಣ ವಿದ್ಯಾರ್ಥಿನಿಯರಿಗೆ ಪ್ರೇರಣೆಯ ದೀಪ**

**ಈ ಸಾಧನೆ ಕೇವಲ ವೈಯಕ್ತಿಕ ಯಶಸ್ಸಲ್ಲ; ಇದು ಗ್ರಾಮೀಣ ಭಾಗದ ವಿದ್ಯಾರ್ಥಿನಿಯರಿಗೆ ದೊಡ್ಡ ಪ್ರೇರಣೆ. ಸೌಲಭ್ಯಗಳ ಕೊರತೆ ಇದ್ದರೂ ಸಂಕಲ್ಪ ಮತ್ತು ಪರಿಶ್ರಮ ಇದ್ದರೆ ಯಾವುದೇ ಗುರಿ ಅಸಾಧ್ಯವಲ್ಲ ಎಂಬ ಸಂದೇಶವನ್ನು ಈ ಸಹೋದರಿಯರು ನೀಡಿದ್ದಾರೆ.**

# ಕಲಕೇರಿ ಬಸವೇಶ್ವರ ಪ.ಪೂ ಕಾಲೇಜು ಅತ್ಯುತ್ತಮ ಸಾಧನೆ









■ ಉದಯರಶ್ಮಿ ದಿನಪತ್ರಿಕೆ


ಕಲಕೇರಿ: ಗ್ರಾಮದ ಮಲ್ಲಿಕಾರ್ಜುನ ವಿಧ್ಯಾವರ್ಧಕ ಸಂಘದ ಅಡಿಯಲ್ಲಿ ನಡೆಯುತ್ತಿರುವ ಅನುಧಾನಿತ ಶ್ರೀ ಬಸವೇಶ್ವರ ಪದವಿ ಪೂರ್ವ ಕಾಲೇಜಿನ ವಿಧ್ಯಾರ್ಥಿಗಳು 2026 ನೇ ಸಾಲಿನ ದ್ವಿತೀಯ ಪಿಯುಸಿ ಕಲಾ ವಿಭಾಗದಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಕುಮಾರಿ ಮಲ್ಲಿಕಾ ಪಡೇಖನೂರ ಹಾಗೂ ಕುಮಾರಿ ನಿಲಮ್ಮ ಬಿಸನಾಳ 569 (94.83%) ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದು, ಕುಮಾರಿ ಪ್ರೇಮಾ ಬಿರಾದಾರ 568 (94.66%) ದ್ವಿತೀಯ ಸ್ಥಾನ ಹಾಗೂ ಕುಮಾರಿ ರುಚಿತಾ ಇಂಡಿ 539 (89.83%) ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ. ಪರೀಕ್ಷೆಗೆ ಒಟ್ಟು 135 ವಿಧ್ಯಾರ್ಥಿಗಳು ಹಾಜರಾಗಿದ್ದು 120 ವಿಧ್ಯಾರ್ಥಿಗಳು ಪಾಸಾಗಿದ್ದಾರೆ 7 ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ, 75 ವಿಧ್ಯಾರ್ಥಿಗಳು ಪ್ರಥ–ಮಶ್ರೇಣಿ,28 ವಿಧ್ಯಾರ್ಥಿಗಳು ದ್ವಿತೀಯ ಶ್ರೇಣಿ ಹಾಗೂ 10 ವಿಧ್ಯಾರ್ಥಿಗಳು ತೃತೀಯ ಶ್ರೇಣಿಯಲ್ಲಿ ಪಾಸಾಗಿದ್ದಾರೆ.

ಕಾಲೇಜಿನ ಒಟ್ಟು ಪಲಿತಾಂಶ ಶೇ 89 ರಷ್ಟಾಗಿದ್ದು, ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯ ಬಿ ಜಿ ಚನಗೊಂಡ ಸೇ–ರಿದಂತೆ ಕಾಲೇಜಿನ ಸಿಬ್ಬಂದಿ ವರ್ಗ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

# ರೇವತಗಾಂವ ಗ್ರಾಪಂಗೆ ಇಓ ರಾಠೋಡ ಧಿಡೀರ್ ಭೇಟಿ :ಪರಿಶೀಲನೆ

■ ಉದಯರಶ್ಮಿ ದಿನಪತ್ರಿಕೆ




ಚಡಚಣ: ಬೇಸಿಗೆಯಲ್ಲಿ ಕುಡಿಯುವ ನೀರಿನ ಪೂರೈಕೆಗೆ ಹೆಚ್ಚಿನ ಒತ್ತು ನೀಡಬೇಕು. ಯಾವುದೇ ಅಡೆತಡೆ ಇಲ್ಲದೆ ನೀರು ಪೂರೈಸಲು ಗಮನ ಹರಿಸಬೇಕು. ಬೇಸಿಗೆ ಮುಗಿಯುವವರೆಗೆ ಗ್ರಾಮ ಪಂಚಾಯಿತಿಯ ಅಭಿವೃದ್ಧಿ ಅಧಿಕಾರಿಗಳು ತಮ್ಮ ತಮ್ಮ ಕೇಂದ್ರ ಸ್ಥಾನದಲ್ಲಿದ್ದು ಕುಡಿಯುವ ನೀರಿನ ಸಮಸ್ಯೆ ಬಾರದಂತೆ ನೋಡಿಕೊಳ್ಳಬೇಕು. ಸಾರ್ವಜನಿಕರ ದೂರುಗಳಿಗೆ ತ್ವರಿತವಾಗಿ ಸ್ಪಂದಿಸಬೇಕು ಕಾರ್ಯನಿರ್ವಾಹಕ ಅಧಿಕಾ–ರಿಗಳಾದ ಅಶೋಕಕುಮಾರ ರಾಠೋಡ ರವರು ಹೇಳಿದರು.

ಗುರುವಾರದಂದು ರೇವತಗಾಂವ ಗ್ರಾಮದ ಗ್ರಾಮ ಪಂಚಾಯತ ಕಾರ್ಯಾಲಯಕ್ಕೆ ಧಿಡೀರ ಭೇಡಿ ನೀಡಿ ಮಾತನಾಡಿದ ಅವರು. ಲಕ್ಷಾಂತರ ರೂ.ಗಳ ವೆಚ್ಚಗಳಲ್ಲಿ ಶುದ್ಧ ಕುಡಿಯುವ ನೀರಿನ ಘಟಕಗಳು ಇದ್ದರೂ ಸಹ ರೇವತಗಾಂವ, ಹಾಲಳ್ಳಿ ಹಾಗೂ ಶಿರಾಡೋಣ ಗ್ರಾಮಗಳಲ್ಲಿ ಜನರ ಬಳಕೆಗೆ ಉಪಯೋಗವಿಲ್ಲದಂತಾಗಿದೆ. ಸಂಬಂಧಪಟ್ಟ ಗುತ್ತಿಗೆದಾರರು ಶುದ್ಧ ಕುಡಿಯುವ ನೀರಿನ ಘಟಕಗಳು ಹಸ್ತಾಂತರವನ್ನು ಮಾಡಿದ್ದರೂ ಅವುಗಳನ್ನು ಸಮರ್ಪಕವಾಗಿ ನಿರ್ವಹಣೆ ಮಾಡುವಲ್ಲಿ ವಿಫಲರಾಗಿದ್ದೀರಿ? ತಕ್ಷಣವೇ ದುರಸ್ಥಿಗೊಳಿಸಿ ಶುದ್ಧ ಕುಡಿಯುವ ನೀರನ್ನು ಸಾರ್ವಜನಿಕರ ಬಳಕೆಗೆ ಅನುಕೂಲ ಮಾಡಿಕೊಡಿ ಎಂದು ಸೂಚಿಸಿದರು. ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಲಭ್ಯವಿರುವ ಕುಡಿಯುವ ನೀರಿನ ಮೂಲಗಳನ್ನು ಪರಿಶೀಲಿಸಿ. ಅಂತೆಯೇ ಬಹು ಹಳ್ಳಿ ಕುಡಿಯುವ ನೀರು, ಬಾವಿ, ಬೋರ್‌ವೆಲ್ ಹಾಗೂ ಪೈಪ್‌ಲೈನ್‌ಗಳ ದುರಸ್ಥಿ ಮಾಡಬೇಕಿದ್ದರೆ ತಕ್ಷಣವೇ ಕ್ರಮವಹಿಸಿ, ಸಾರ್ವಜನಿಕರಿಗೆ ಕುಡಿಯುವ ನೀರಿನ ಸಮಸ್ಯ ಎದುರಾಗದಂತೆ ಮುನ್ನೆಚ್ಚರಿಕೆ ವಹಿಸುವಂತೆ ಸೂಚಿಸಿದರು. ನಂತರ ವಿವಿಧ ಕಡತಗಳ ಪರಿಶೀಲನೆ ನಡೆಸಿದರು.

ಈ ಸಂದರ್ಭದಲ್ಲಿ ಗ್ರಾಪಂ ಪಿಡಿಓ ದೇವೇಂದ್ರ ವಾಗ್ಮೋಡೆ, ಕಾರ್ಯದರ್ಶಿ ಮಾದೇವ ಪೂಜಾರಿ, ಗ್ರಾಮೀಣ ಪುನರ್ವಸತಿ ಕಾರ್ಯಕರ್ತ ಎಸ್.ಎಂ.ಮಾಳಿ, ಮಾಜಿ ಗ್ರಾಪಂ ಸದಸ್ಯ ಮಹಾದೇವ ಅಂಕಲಗಿ, ವಿಜಯಕುಮಾರ ಹಿರೇಮಠ, ಲಾಯಪ್ಪ ಲೋಣಿ, ಸುರೇಶ ಹಕ್ಕೆ ಸೇರಿದಂತೆ ಗ್ರಾಪಂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಪ್ರೇಮಿಗಳ ಹೃದಯದಲ್ಲಿ ರಂಗಭೂಮಿಗೆ ಸ್ಥಾನ :ಬನಸೋಡೆ

■ ಉದಯರಶ್ಮಿ ದಿನಪತ್ರಿಕೆ



ಜಮಖಂಡಿ: "ಕನ್ನಡ ರಂಗಭೂಮಿಗೆ ವಿಶಿಷ್ಟವಾದ ಪರಂಪರೆಯಿದೆ. ಇಂದಿನ ರಂಗಭೂಮಿ ದೃಶ್ಯಮಾಧ್ಯಮಗಳ ಪ್ರಭಾವದಿಂದ ಹಲವಾರು ಸಾಂಪ್ರದಾಯಿಕ ನಾಟಕಗಳು ನಶಿಸುತ್ತಿದ್ದರೂ, ಪ್ರೇಮಿಗಳ ಹೃದಯದಲ್ಲಿ ತನ್ನ ಸ್ಥಾನವನ್ನು ಉಳಿಸಿಕೊಂಡಿದೆ," ಎಂದು ಶ್ರೀ ಬಿ.ಆರ್. ಬನಸೋಡೆ ಹೇಳಿದರು. ಬಿ.ಎಲ್.ಡಿ.ಇ ಸಂಸ್ಥೆಯ ಶಿಕ್ಷಣ ಮಹಾವಿದ್ಯಾಲಯ (ಬಿ.ಇಡಿ), ಜಮಖಂಡಿಂ–ಯಲ್ಲಿ ನಾಟಕ ಮತ್ತು ರಂಗಭೂಮಿ ಕಲೆ ವಿಭಾಗದ ವತಿಯಿಂದ ಆಯೋಜಿಸಲಾದ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಈ ಸಂದರ್ಭದಲ್ಲಿ "ಮಧುರಚೆನ್ನ" ಕುರಿತ ಏಕವ್ಯಕ್ತಿ ನಾಟಕವನ್ನು ಮೈಸೂರಿನ ಕವಿತಾ ಕಲಾ ತಂಡವು ಮನೋಜ್ಞವಾಗಿ ಪ್ರದರ್ಶಿಸಿತು.

ಮಧುರಚೆನ್ನರ ಜೀವನ, ಸಾಹಿತ್ಯ ಸಾಧನೆ ಹಾಗೂ ಅವರ ಚಿಂತನೆಗಳನ್ನು ಪ್ರತಿಬಿಂಬಿಸುವಂತೆ ನಾಟಕ ರೂಪುಗೊಂಡಿದ್ದು, ಪ್ರೇಕ್ಷಕರ ಮೆಚ್ಚುಗೆಗೆ ಪಾತ್ರವಾಯಿತು. ನಾಟಕದ ಪ್ರಸ್ತುತಿಯನ್ನು ಮಧುರಚೆನ್ನರ ಮೊಮ್ಮಗ ಶ್ರೀ ಜಗದೇವ ಗಲಗಲಿ ಅವರು ಭಾವಪೂರ್ಣವಾಗಿ ನಿರ್ವಹಿಸಿದರು. ನಾಟಕದ ರಚನೆ ಮತ್ತು ನಿರ್ದೇಶನವನ್ನು ಶ್ರೀ ಗಣೇಶ ಅಮಿನಗಡ ಮಾಡಿದ್ದಾರೆ.

ಕಾರ್ಯಕ್ರಮದಲ್ಲಿ ಮಾತನಾಡಿದ ಗಣೇಶ ಅಮಿನಗಡ ಅವರು, "ಮಧುರಚೆನ್ನರ ಬದುಕುಬರಹ ಇಂದಿನ ಪೀಳಿಗೆಗೆ ಮಾರ್ಗದರ್ಶನವಾಗುತ್ತದೆ. ಕನ್ನಡ ಭಾಷೆಯ ಅಭಿವೃದ್ಧಿಗೆ ಅವರ ಕೊಡುಗೆ ಅಪಾರವಾಗಿದೆ," ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರಾಂಶುಪಾಲರಾದ ಡಾ. ಸುನಂದ ಎಸ್. ಶಿರಂದ ಅವರು, ನಾಟಕಗಳ ಮೂಲಕ ವಿದ್ಯಾರ್ಥಿಗಳಲ್ಲಿ ಕಲಾ ಅಭಿರುಚಿ ಬೆಳೆಸುವುದು ಮುಖ್ಯ ಎಂದು ಅಭಿಪ್ರಾಯಪಟ್ಟರು. ಉಪನ್ಯಾಸಕ ವೃಂದ ಹಾಗೂ ಪ್ರಶಿಕ್ಷಣಾರ್ಥಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿ ಕಲಾವಿದರನ್ನು ಅಭಿನಂದಿಸಿದರು. ಕಾರ್ಯಕ್ರಮವು ಸಾಹಿತ್ಯ ಮತ್ತು ರಂಗಭೂಮಿಯ ಮಹತ್ವವನ್ನು ವಿದ್ಯಾರ್ಥಿಗಳಿಗೆ ಪರಿಚಯಿಸುವಲ್ಲಿ ಯಶಸ್ವಿಯಾಯಿತು.

## ನಮ್ಮನ್ನು ಬಿಟ್ಟು ಹೋಗಬೇಡಿ' ಎಂದು ಅಂಗಲಾಚಿ ಕಣ್ಣೀರಿಟ್ಟ ವಿದ್ಯಾರ್ಥಿಗಳು!

# ಶಿಕ್ಷಕಿಯ ವರ್ಗಾವಣೆಗೆ ನೊಂದ ಮಕ್ಕಳಿಂದ ಭಾವುಕ ಬೀಳ್ಕೊಡುಗೆ

■ ಉದಯರಶ್ಮಿ ದಿನಪತ್ರಿಕೆ



ಸಂಬರಗಿ: ಶಿಕ್ಷಕ ಮತ್ತು ವಿದ್ಯಾರ್ಥಿಗಳ ನಡುವಿನ ಸಂಬಂಧ ಕೇವಲ ಪಾಠಕ್ಕೆ ಸೀಮಿತವಲ್ಲ, ಅದೊಂದು ಅವಿನಾಭಾವ ಸಂಬಂಧ ಎಂಬುದಕ್ಕೆ ತಾಲೂಕಿನ ಸಂಬರಗಿ ಗ್ರಾಮದ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ ನಡೆದ ಘಟನೆ ಸಾಕ್ಷಿಯಾಗಿದೆ.

ಕಳೆದ 10 ವರ್ಷಗಳಿಂದ ಇದೇ ಶಾಲೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿ, ನಲಿ–ಕಲಿ ಮಾದರಿಯ ಮೂಲಕ ಮಕ್ಕಳಿಗೆ ಅಚ್ಚುಮೆಚ್ಚಿನ ಗುರುವಾಗಿದ್ದ ಶಶಿಕಲಾ ಬಜಂತ್ರಿ ಅವರ ವರ್ಗಾವಣೆಯ ಸಂದರ್ಭದಲ್ಲಿ ಶಾಲೆಯಲ್ಲಿ ಭಾವನಾತ್ಮಕ ದೃಶ್ಯಗಳು ಕಂಡುಬಂದವು. ಶಶಿಕಲಾ ಅವರು ಗಡಿಭಾಗದ ಈ ಹಳ್ಳಿಯ ಶಾಲೆಯಲ್ಲಿ ಗುಣಮಟ್ಟದ ಶಿಕ್ಷಣ ನೀಡುವ ಮೂಲಕ ಮಕ್ಕಳ ಭವಿಷ್ಯಕ್ಕೆ ಭದ್ರ ಬುನಾದಿ ಹಾಕಿಕೊಟ್ಟಿದ್ದರು.

ಕೌಟುಂಬಿಕ ಕಾರಣಗಳಿಗಾಗಿ ಶಿಕ್ಷಕಿಯ ವರ್ಗಾವಣೆ ಅನಿವಾರ್ಯವಾಗಿದ್ದರೂ, ನೆಚ್ಚಿನ ಶಿಕ್ಷಕಿ ಶಾಲೆಯನ್ನು ಬಿಟ್ಟು ಹೋಗುತ್ತಿದ್ದಾರೆ ಎಂಬ ವಿಷಯ ತಿಳಿಯುತ್ತಿದ್ದಂತೆಯೇ ಪುಟಾಣಿ ಮಕ್ಕಳು "ನಮ್ಮನ್ನು ಬಿಟ್ಟು ಹೋಗಬೇಡಿ" ಎಂದು ಶಿಕ್ಷಕಿಯನ್ನು ಅಪ್ಪಿಕೊಂಡು ಕಣ್ಣೀರಿಟ್ಟರು. ಮಕ್ಕಳ ಪ್ರೀತಿಯನ್ನು ಕಂಡು ಶಿಕ್ಷಕಿ ಶಶಿಕಲಾ ಅವರು ಕೂಡ ಭಾವುಕರಾಗಿ ಕಣ್ಣೀರು ಹಾಕಿದರು.ಕಪ್ಪು ಹಲಗೆಯ ಮೇಲೆ ಭವಿಷ್ಯದ ಕನಸುಗಳನ್ನು ಬಿತ್ತಿದ ಶಶಿಕಲಾ ಬಜಂತ್ರಿ ಅವರು ಕೇವಲ ಶಿಕ್ಷಕಿಯಾಗಿರದೆ, ಮಕ್ಕಳಿಗೆ ತಾಯಿರೂಪಿ ಮಾರ್ಗದರ್ಶಕರಾಗಿದ್ದರು.ಇರಬೇಕು ಇಂತಹ ಶಿಕ್ಷಕಿ ಎಂಬ ಮಾತುಗಳು ಪಾಲಕರಿಂದ ಕೇಳಿಬಂದವು. 10 ವರ್ಷಗಳ ಒಡನಾಟವನ್ನು ಕಡಿದುಕೊಂಡು ಹೋಗುವಾಗ ಶಾಲೆಯ ಇತರ ಶಿಕ್ಷಕರು ಹಾಗೂ ಗ್ರಾಮಸ್ಥರ ಕಣ್ಣುಗಳು ಕೂಡ ಒದ್ದೆಯಾಗಿದ್ದವು.

# ಏ.15 ರಿಂದ ಮಕ್ಕಳ ಚರ್ಮರೋಗಗಳಿಗೆ ಉಚಿತ ತಪಾಸಣೆ & ಚಿಕಿತ್ಸೆ

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ನಗರದ ಬಿ.ಎಲ್.ಡಿ.ಇ ಸಂಸ್ಥೆಯ ಎ.ವಿ.ಎಸ್ ಆಯುರ್ವೇದ ಮಹಾವಿದ್ಯಾಲಯ, ಆಸ್ಪತ್ರೆಯ ಕೌಮಾರಭೃತ್ಯ ವಿಭಾಗದ ವತಿಯಿಂದ ಮಕ್ಕಳಲ್ಲಿ ಕಂಡುಬರುವ ಚಂಚಲತೆ ಹಾಗೂ ಅತೀ ಚಟುವಟಿಕೆ (ಏಆಊಆ) ಕುರಿತು ಉಚಿತ ತಪಾಸಣೆ, ಪಂಚಕರ್ಮ ಚಿಕಿತ್ಸೆ ಮತ್ತು ಔಷಧ ವಿತರಣೆ ಸೌಲಭ್ಯ ಹಾಗೂ ಮಕ್ಕಳಲ್ಲಿ ಕಾಣಿಸುವ ಚರ್ಮರೋಗಗಳಿಗೆ ಉಚಿತ ತಪಾಸಣೆ ಹಾಗೂ ಚಿಕಿತ್ಸೆ ಶಿಬಿರ ಏಪ್ರಿಲ್ 15 ರಿಂದ ಏಪ್ರಿಲ್ 18ರ ವರೆಗೆ ನಡೆಯಲಿದೆ.

ಬುಧವಾರದಿಂದ ಶನಿವಾರದ ವರೆಗೆ 4 ದಿನ ಈ ಶಿಬಿರ ಆಯೋಜಿಸಲಾಗಿದೆ. ಮಕ್ಕಳಲ್ಲಿ ಕಂಡು ಬರುವ ಲಕ್ಷಣಗಳಾದ ಒಂದೇ ಜಾಗದಲ್ಲಿ ಶಾಂತವಾಗಿ ಕುಳಿತುಕೊಳ್ಳಲು ಆಗದಿರುವುದು, ಹೆಚ್ಚು ಓಡಾಡುವುದು ಅಥವಾ ಮಾತನಾಡುವುದು, ತನ್ನ ಸರದಿ ಕಾಯದೆ ಮಾತನಾಡುವುದು, ಚಂಚಲತೆ, ಗಮನ ಕೊರತೆ, ಪಾಠಗಳಲ್ಲಿ ಗಮನ ಕೊಡಲಾಗದಿರುವುದು, ಹೋಂವರ್ಕ್ ಪೂರ್ಣಗೊಳಿಸದಿರುವುದು, ದಿನನಿತ್ಯದ ಕೆಲಸಗಳಲ್ಲಿ ಏಕಾಗ್ರತೆ ಕೊರತೆ ಇತ್ಯಾದಿ ಸಮಸ್ಯೆಗಳನ್ನು ಎದುರಿಸುತ್ತಿರುವ ಮಕ್ಕಳ ಪೋಷಕರು ಈ ಶಿಬಿರದ ಸದುಪಯೋಗ ಪಡೆದುಕೊಳ್ಳಬೇಕು ಎಂದು ಬಿ.ಎಲ್.ಡಿ.ಇ. ಸಂಸ್ಥೆಯ ಆಯುರ್ವೇದ ಆಸ್ಪತ್ರೆಯ ಆಡಳಿತಾಧಿಕಾರಿ ಡಾ. ಸಂಜಯ ಕಡ್ಲಿಮಟ್ಟಿ ಅವರು ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ–ಸಂಪರ್ಕಿಸಬಹುದಾಗಿದೆ. 9513397413 ಸಂಪರ್ಕಿಸಬಹುದಾಗಿದೆ.

# ಯುದ್ಧಗಳು ಮಾನವ ನಿರ್ಮಿತ ವಿಪತ್ತು

## ಮನದಂಗಳ

■ ಉದಯರಶ್ಮಿ ದಿನಪತ್ರಿಕೆ







ಇಂದಿನ ಯುದ್ಧಗಳು ಕೇವಲ ಬಂದೂಕುಗಳ ಮೂಲಕ ನಡೆಯುವ ಬದಲು ಇಡೀ ಮನುಕುಲವನ್ನೇ ಕ್ಷಣಾರ್ಧದಲ್ಲಿ ನಾಶಪಡಿಸುವಂಥ ಅಪಾಯಕಾರಿ ಅಣ್ವಸ್ತ್ರಗಳು ಮತ್ತು ಜೈವಿಕ ಅಸ್ತ್ರಳಂತಹ ಸಮೂಹನಾಶಕ ಅಸ್ತ್ರಗಳನ್ನು ಪ್ರತೀ ದೇಶಗಳು ಒಗ್ಗೂಡಿಸಿ ಇಟ್ಟುಕೊಂಡಿವೆ. ಎಲ್ಲಾದರೂ ವಿವೇಚನೆ ಇಲ್ಲದೇ ಅವುಗಳನ್ನು ಪ್ರಯೋಗಿಸಿದರೆ ಅದರಿಂದ ಶತಮಾನದ ಹಿಂದೆ ಜಪಾನಿನಲ್ಲಿ ಆಗಿರುವ ಯುದ್ಧದ ಭೀಕರತೆಗಿಂತಲೂ ಹಲವು ಪಟ್ಟು ಹೆಚ್ಚಿನ ಪ್ರಮಾಣದ ನಾಶವಾಗುವುದು ದಿಟ. ಇಂತಹ ದುರಂತಕ್ಕೆ ಕಾರಣವಾಗುವ ಯುದ್ಧಕ್ಕೆ ಕೈಹಾಕುವ ಮೊದಲು ಯುದ್ಧದಾಹಿ ದೇಶಗಳು ತಮ್ಮ ದೇಶದ ನಾಗರಿಕರ ಮೇಲೆ ಆಗಬಹುದಾದ ಹಾನಿ ಮತ್ತು ದೇಶದ ಭವಿಷ್ಯದ ಕುರಿತು ಚಿಂತಿಸಬೇಕು. ಬರುವ ಸಮಸ್ಯೆಗಳಿಗೆ ಎಲ್ಲಕ್ಕೂ ಯುದ್ಧವೇ ಪರಿಹಾರ ಅಲ್ಲ ಎನ್ನುವುದನ್ನು ಗತಿಸಿರುವ ಯುದ್ಧ ಪರಿಣಾಮಗಳಿಂದ ಅರಿಯಬೇಕು.

ಯುದ್ಧಗಳು ಯಥೇಚ್ಛ ಸಾವುನೋವು, ಆರ್ಥಿಕ ಕುಸಿತ, ಸಾಮಾಜಿಕ ಅಸ್ಥಿರತೆ ಮತ್ತು ಪರಿಸರ ವಿನಾಶವನ್ನು ಉಂಟುಮಾಡುವ ಮಾನವ ನಿರ್ಮಿತ ವಿಪತ್ತಾಗಿದೆ. ಇದು ತಲೆಮಾರುಗಳ ಕಾಲದವರೆಗೆ ಕಾಡುವ ಮಾನಸಿಕ ಆಘಾತ, ಮೂಲಸೌಕರ್ಯಗಳ ನಾಶ, ನಿರಾಶ್ರಿತರ ಸಮಸ್ಯೆ ಮತ್ತು ಜಾಗತಿಕ ರಾಜ–ಕೀಯ ಅಸ್ಥಿರತೆಗೆ ಕಾರಣ ಆಗುತ್ತದೆ. ಇತಿಹಾಸದ ಉದ್ದಕ್ಕೂ ಯುದ್ಧಗಳು ಶಾಶ್ವತ ಶಾಂತಿಯನ್ನು ಭಂಗಗೊಳಿಸಿ ಅಭಿವೃದ್ಧಿಯನ್ನು ದಶಕಗಳಷ್ಟು ಹಿಂದಕ್ಕೆ ತಳ್ಳುತ್ತವೆ. ಯುದ್ಧಗಳಿಂದ ಲಕ್ಷಾಂತರ ಸೈನಿಕರು ಮತ್ತು ನಾಗರಿಕರ ಸಾವಾಗುತ್ತದೆ. ಶಾಶ್ವತ ಅಂಗವಿಕಲತೆ, ಕುಟುಂಬ ನಾಶದಿಂದ ಮಕ್ಕಳು ಅನಾಥರಾಗುತ್ತಾರೆ. ಕಾರ್ಖಾನೆಗಳು, ಮನೆಗಳು, ಮೂಲಸೌಕರ್ಯ ನಾಶದಿಂದ ಯುದ್ಧದ ವೆಚ್ಚವು ರಾಷ್ಟ್ರಗಳು ಆರ್ಥಿಕ ದಿವಾಳಿಗೆ ಒಳಗಾಗುತ್ತವೆ. ಸಾಮೂಹಿಕ ವಲಸೆಯಿಂದ ನಿರಾಶ್ರಿತರ ಸಮಸ್ಯೆ, ಬಡತನ ಹಚ್ಚಳ, ಹಸಿವು, ಮತ್ತು ಮಾನಸಿಕ ಆಘಾತ ಸಂಭವಿಸಿ ವಿಷಕಾರಿ ಅನಿಲಗಳು, ಆಯುಧಗಳ ಬಳಕೆ, ವಿಕಿರಣಶೀಲ ವಸ್ತುಗಳಿಂದ ಪರಿಸರಕ್ಕೆ ಶಾಶ್ವತ ಹಾನಿಯಾಗುತ್ತದೆ. ಗಡಿಗಳ ಮರುರಚನೆ, ಸರ್ಕಾರಗಳ ಪತನ, ಮತ್ತು ಅಂತರರಾಷ್ಟ್ರೀಯ ಸಂಬಂಧಗಳಲ್ಲಿ ಬಿರುಕು ಉಂಟಾಗುತ್ತದೆ.

ದೇಶಗಳ ನಡುವೆ ಪರಿಸ್ಥಿತಿ ಬಿಗಡಾಯಿಸುವ ಸನ್ನಿವೇಶ ಬಂದಾಗ ಅಂತಹ ಸಮಸ್ಯೆಗಳನ್ನು ಅಂತಾರಾಷ್ಟ್ರೀಯ ಮಟ್ಟದಲ್ಲಿ ಮಾತುಕತೆಗಳಿಂದ ಪರಿಹರಿಸಿಕೊಂಡು ದೇಶಗಳ ಸೌಹಾರ್ದಕ್ಕೆ ಮುನ್ನುಡಿ ಬರೆಯಬೇಕು. ಇದರೊಂದಿಗೆ ಯುದ್ಧದ ಭೀಕರತೆ ಎಂದಿಗೂ ಕಾಡದಿರಲಿ ಎನ್ನುವ ಘೋಷವಾಕ್ಯವನ್ನು ಪ್ರತೀ ದೇಶಗಳೂ ತಮ್ಮ ಧ್ಯೇಯವಾಕ್ಯವನ್ನಾಗಿ ಆರಿಸಿಕೊಳ್ಳಬೇಕು. ಯುದ್ಧದ ಕಾರ್ಮೋಡ ಕವಿದ ಸಂದರ್ಭಗಳಲ್ಲಿ ಉಭಯ ದೇಶಗಳ ಮತ್ತು ಅಂತರಾಷ್ಟ್ರೀಯ ರಾಜತಂತ್ರಜ್ಞರು, ವಿಶ್ವಸಂಸ್ಥೆ ಶಾಂತಿಪಾಲನಾ ಪಡೆಗಳು ಯುದ್ಧೋನ್ಮಾದವನ್ನು ತಣಿಸುವ ಕೆಲಸವನ್ನು ಮಾಡಬೇಕು. ಎರಡು ದೇಶಗಳ ನಡುವೆ ಯುದ್ಧವಾದಾಗ ಅವುಗಳ ಮಿತ್ರದೇಶಗಳು ತಾವೂ ಯುದ್ಧಕ್ಕಿಳಿಯುವ ಬದಲು ಭಾರತ ದೇಶವು ಅನುಸ–ರಿಸಿಕೊಂಡು ಬಂದಿರುವ ಅಲಿಪ್ತ ನೀತಿಯನ್ನು ಪ್ರತೀ ದೇಶಗಳೂ ಅನುಸರಿಸಿ ಯುದ್ಧಕ್ಕೆ ಮತ್ತಷ್ಟು ಉತ್ತೇಜನ ನೀಡುವುದನ್ನು ನಿಲ್ಲಿಸಬೇಕು.

ಲೇಖಕ
ಸಂತೋಷ್‌ರಾವ್ ಪೆರ್ಮುಡ
ಪೆರ್ಮುಡ ಮನೆ
ಪಟ್ರಮೆ ಗ್ರಾಮ ಮತ್ತು ಅಂಚೆ
ಬೆಳ್ತಂಗಡಿ ತಾಲೂಕು
ದ.ಕ ಜಿಲ್ಲೆ–574198
ದೂ: 9742884160



# ಜ್ಞಾನ, ವಿಶ್ವಾಸ ಮತ್ತು ಚಟುವಟಿಕೆಗಳು

## ನಾವು - ನಮ್ಮ ಮಕ್ಕಳು
### (ಮಕ್ಕಳ ಪ್ರಗತಿಯಲ್ಲಿ ಪಾಲಕರ ಪಾತ್ರ ಕುರಿತ ಲೇಖನ ಮಾಲಿಕೆ)

■ ಉದಯರಶ್ಮಿ ದಿನಪತ್ರಿಕೆ

ಪ್ರತಿ ಸಮಸ್ಯೆಗೂ ಒಂದು ಪರಿಹಾರವಿದೆ ಎಂಬ ವಿಶ್ವಾಸ ಮನುಷ್ಯನಲ್ಲಿ ಮೂಡಲು ಕಾರಣ ಆತನ ಜ್ಞಾನದ ಬುನಾದಿ ಮತ್ತು ಆತ ತನ್ನ ಕೆಲಸದಲ್ಲಿ ಇಟ್ಟಿರುವ ನಂಬಿಕೆ.

ಮನುಷ್ಯನಿಗೆ ಆತ್ಮವಿಶ್ವಾಸ ಬರುವುದು ಆತ ಸಮಸ್ಯೆ ಗಳನ್ನು ನೋಡುವ ಮತ್ತು ಅವುಗಳನ್ನು ಎದುರಿಸುವ ರೀತಿಯಲ್ಲಿ. ಸಮಸ್ಯೆಯನ್ನು ಕಂಟಕ ಎಂದು ನೋಡಿದಾಗ ಮನುಷ್ಯ ಬೇಸರಕ್ಕೊಳ್ಳಗಾಗುತ್ತಾನೆ ಬದಲಾಗಿ ಸಮಸ್ಯೆಯನ್ನು ಸವಾಲಾಗಿ ಭಾವಿಸಿ ಅದರ ಪರಿಹಾರಗಳನ್ನುಯೋಚಿಸಿದಾಗಸಮಸ್ಯೆಗಳು ಸುಲಭವಾಗಿ ಪರಿಹರಿಸಲ್ಪಡುತ್ತವೆ. ಮತ್ತೆ ಕೆಲ ಜನರು ಪರಿಹಾರದಲ್ಲೂ ಸಮಸ್ಯೆಗಳನ್ನು ಹುಡುಕುವರು.

ನಮ್ಮಲ್ಲಿರುವ ಜ್ಞಾನ ಮತ್ತು ನಾವು ವಸ್ತು ವಿಷಯಗಳಲ್ಲಿ ಹೊಂದಿರುವ ವಿಶ್ವಾಸ ಮತ್ತು ಅವುಗಳನ್ನು ಈಡೇರಿಸುವ ನಿಟ್ಟಿನಲ್ಲಿ ನಾವು ಕೈಗೊಳ್ಳುವ ಚಟುವಟಿಕೆಗಳು ನಮಗೆ ಸವಾಲನ್ನು ಪರಿಹರಿಸಲು ಶಕ್ತಿಯನ್ನು ನೀಡುತ್ತವೆ.

ಆದರೆ ಸಂತೋಷದ ವಿಷಯವೆಂದರೆ ಇತ್ತೀಚಿನ ದಿನಗಳಲ್ಲಿ ಎಲ್ಲರೂ ಸಮಸ್ಯೆಗಳಿಗೆ ಪರಿಹಾರವನ್ನು ಹುಡುಕುವ ಮತ್ತು ಅವುಗಳನ್ನು ಪರಿಹರಿಸಿಕೊಳ್ಳುವ ನಿಟ್ಟಿನಲ್ಲಿ ಯಶಸ್ವಿಯಾಗುತ್ತಿದ್ದಾರೆ. ಪ್ರತಿಯೊಂದು ಸಮಸ್ಯೆಗೂ ಪರಿಹಾರ ಇದ್ದೇ ಇದೆ ಎಂಬ ನಂಬಿಕೆ ಜನರಲ್ಲಿ ಕ್ರಮೇಣ ಹೆಚ್ಚಾಗುತ್ತಿದೆ. ಜ್ಞಾನ,ವಿಶ್ವಾಸ ಮತ್ತು ಚಟುವಟಿ–ಕೆಗಳು ಒಂದಕ್ಕೊಂದು ಪೂರಕವಾಗಿ ಕಾರ್ಯನಿರ್ವಹಿಸುತ್ತವೆ.



ಜ್ಞಾನ, ವಿಶ್ವಾಸ ಮತ್ತು ಚಟುವಟಿ–ಕೆಗಳಲ್ಲಿ ನಾವು ಮೊದಲು ಚಟುವಟಿಕೆಯನ್ನು ಪರಿಗಣಿಸಿದಾಗ ಯಾವುದೇ ಒಂದು ಚಟುವಟಿಕೆ ಇಲ್ಲವೇ ಕ್ರಿಯೆಯನ್ನು ನಾವು ವಿಶ್ವಾಸದಿಂದ ಮಾಡುತ್ತೇವೆ.

ನಾವು ಬ್ಯಾಂಕಿನಲ್ಲಿ ನಮ್ಮ ಹಣವನ್ನು ಡೆಪಾಸಿಟ್ ಮಾಡುತ್ತೇವೆ, ಚಿನ್ನವನ್ನು ಇಡುತ್ತೇವೆ ಕಾರಣ ನಮಗೆ ಬ್ಯಾಂಕಿನ ಮೇಲೆ ಇರುವ ನಂಬಿಕೆ.

ಮಕ್ಕಳು ಶಾಲೆಗೆ ಹೋಗಿ ಶಿಕ್ಷಕ–ರಿಂದ ಪಾಠ ಕಲಿಯುತ್ತಾರೆ, ಅದು ಅವ–ರಿಗೆ ಶಿಕ್ಷಕರ ಮೇಲೆ ಇರುವ ನಂಬಿಕೆ ಇನ್ನು ಶಾಲೆಗೆ ಹೋಗುವುದು ತಮಗೆ ಅಲ್ಲಿ ಸುರಕ್ಷಿತ ವಾತಾವರಣದ ಜೊತೆಗೆ ಕಲಿಕೆ ದೊರೆಯುತ್ತದೆ ಎಂಬ ಕಾರಣಕ್ಕೆ.

ರೈತ ಹೊಲದಲ್ಲಿ ಬೆಳೆಯನ್ನು ತೆಗೆಯುತ್ತೇನೆ ಎಂಬ ನಂಬಿಕೆಯಿಂದಲೇ ಹೊಲವನ್ನು ಉತ್ತು ಹದ ಮಾಡಿ ಬೀಜವನ್ನು ಬಿತ್ತುತ್ತಾನೆ.

ಒಂದು ಒಳ್ಳೆಯ ಭವಿಷ್ಯ ನಮ್ಮ ಮಕ್ಕಳಿಗೆ ಕಾದಿದೆ ಎಂಬ ವಿಶ್ವಾಸದಿಂದಲೇ ಪಾಲಕರು ತಮ್ಮ ಮಕ್ಕಳನ್ನು ಶಾಲೆ, ಕಾಲೇಜುಗಳಿಗೆ ಕಳುಹಿಸುತ್ತಾರೆ.

ಹೀಗೆ ಎಲ್ಲ ಕೆಲಸ ಕಾರ್ಯಗಳು ನಿಂತಿರುವುದು ನಂಬಿಕೆ ಮತ್ತು ವಿಶ್ವಾಸದ ಮೇಲೆಯೇ.

ಅದೆಷ್ಟೇ ಅಪಾಯಕಾರಿ ಎಂಬ ಭಯ ಇದ್ದರೂ ಕೂಡ ವಿಶ್ವಾಸವು ಅದನ್ನು ಜಯಿಸಲು ಸಾಧ್ಯ.. ನಮ್ಮೆಲ್ಲರ ಮನೆಗಳಲ್ಲಿ ಇರುವ ಎಲ್ ಪಿ ಜಿ ಗ್ಯಾಸ್ ಸಿಲೆಂಡರ್ ಸ್ಫೋಟಿಸಬಹುದು ಎಂಬ ಅಪಾಯದ ಅರಿವಿದ್ದರೂ ಕೂಡ ನಾವು ಸ್ಫೋಟಿಸುವುದಿಲ್ಲ ಎಂಬ ನಂಬಿಕೆಯಿಂದ ಮನೆಯಲ್ಲಿ ಇಟ್ಟುಕೊಳ್ಳುತ್ತೇವೆ ಅಲ್ಲವೇ?

ಇನ್ನು ಯಾವುದಾದರು ಸ್ಥಳಕ್ಕೆ ನಾವು ಹೋಗುವಾಗ ಖಂಡಿತವಾಗಿಯೂ ಯಾವುದೇ ತೊಂದರೆ ಇಲ್ಲದೆ ನಿಗದಿತ ಸಮಯಕ್ಕೆ ನಾವು ಅಲ್ಲಿ ಮುಟ್ಟುತ್ತೇವೆ ಎಂದು ನಾವು ನಮ್ಮ ಕಾರಿನ ಮೇಲೆ ಭರವಸೆ ಇಟ್ಟುಕೊಳ್ಳುತ್ತೇವೆ ಅಲ್ಲವೇ?

ರಸ್ತೆಯನ್ನು ದಾಟುವ ಮಗು ಅಪ್ಪನ ಕೈಗಳಲ್ಲಿ ತಾನು ಸುರಕ್ಷಿತ ಎಂಬ ಭಾವದಿಂದಲೇ ಅಪ್ಪನ ಕೈಹಿಡಿದು

ನಡೆಯುತ್ತದೆ. ಹೀಗೆ ನಮ್ಮ ಬದುಕಿನಲ್ಲಿ ನಡೆಯುವ ಪ್ರತಿಯೊಂದು ಕಾರ್ಯವು ನಂಬಿಕೆಯ ತಳಹದಿಯ ಮೇಲೆಯೇ ನಡೆಯುತ್ತದೆ.

ಪಾಲಕರು ಮತ್ತು ಮಕ್ಕಳ ನಡುವಿನ ನಂಬಿಕೆಯಂತೂ ಅವಿನಾಭಾವವಾದದ್ದು. ತಮ್ಮ ಮಕ್ಕಳು ಓದಿನಲ್ಲಿ ಉತ್ತಮವಾಗಿ ತೊಡಗಿಸಿಕೊಂಡಿದ್ದರೆ ಪಾಲಕರು ಕೂಡ ಅಷ್ಟೇ ಅದಮ್ಯ ಆತ್ಮವಿಶ್ವಾಸದಿಂದ ಅವರ ಓದಿಗೆ ತಮ್ಮ ಜೀವಮಾನದ ಗಳಿಕೆಯನ್ನು ಖರ್ಚು ಮಾಡುತ್ತಾರೆ. ಅದೆಷ್ಟೇ ಖರ್ಚಾಗಲಿ! ಚೆನ್ನಾಗಿ ಓದುತ್ತಿರುವ ಮಕ್ಕಳು ಮುಂದೆ ಬರಲು ಎಲ್ಲ ಖರ್ಚನ್ನು ನಿಭಾಯಿಸಲಿ




ನಾನು ಸಿದ್ಧನಿದ್ದೇನೆ ಎಂಬ ನಂಬಿಕೆ ಅವರಲ್ಲಿ ಮೂಡುತ್ತದೆ.

ಕ್ರಿಯೆ ಮತ್ತು ನಂಬಿಕೆಯ ಮೂಲ ಜ್ಞಾನ.

ಶಾಲೆಗೆ ಹೋಗುವ ಮಗು ತನ್ನ ಶಾಲೆ ಮತ್ತು ಶಿಕ್ಷಕರಲ್ಲಿ ನಂಬಿಕೆ ಇರುತ್ತದೆ. ತನ್ನ ಅಪ್ಪ ಅಮ್ಮ ತನ್ನ ಒಳಿತಿಗೆ ಕಾರ್ಯನಿರ್ವಹಿಸುತ್ತಾರೆ ಎಂಬ ನಂಬಿಕೆ ಮಗುವಿನ ಬದುಕಿನಲ್ಲಿ ಅತ್ಯುತ್ತಮವಾಗಿ ಕಾರ್ಯನಿರ್ವಹಿಸುತ್ತದೆ. ಅಂತೆಯೇ ಮಕ್ಕಳಲ್ಲಿ ಈ ನಂಬಿಕೆಯನ್ನು ಹುಟ್ಟು ಹಾಕಲು ಪಾಲಕರು ನಮ್ಮ ಧಾರ್ಮಿಕ, ಸಾಮಾಜಿಕ, ಸಾಂಸ್ಕೃತಿ–ಕ ಮೌಲ್ಯಗಳನ್ನು ಅವರಲ್ಲಿ ತುಂಬಬೇಕು. ನಮ್ಮ ಬದುಕಿನಲ್ಲಿ ಹಾಸು ಹೊಕ್ಕಾಗಿರುವ ಎಷ್ಟೋ ಸಾಂಪ್ರದಾಯಿಕ ವಿಷಯಗಳನ್ನು ನಾವು ಮಕ್ಕಳಿಗೆ ತಿಳಿಸಿ ಹೇಳುವ ಗೋಜಿಗೆ ಹೋಗುವುದಿಲ್ಲ. ಇದರಿಂದಾಗಿ ಮಕ್ಕಳಿಗೆ ಆ ವಿಷಯದ ಕುರಿತು ಜ್ಞಾನ ದೊರೆಯುವುದಿಲ್ಲ.

ಉದಾಹರಣೆಗೆ ಯಾವುದಾದರೂ ಕಾರ್ಯಕ್ರಮವನ್ನು ಆರಂಭಿಸುವಾಗ ಇಲ್ಲವೇ ಪೂಜೆಯನ್ನು ಮಾಡುವಾಗ ವಿನಾಯಕನನ್ನು ಏಕೆ ಪೂಜಿಸುತ್ತಾರೆ? ಎಂಬ ಮಗುವಿನ ಪ್ರಶ್ನೆಗೆ ನಾವು ಸರಿಯಾಗಿ ಉತ್ತರಿಸಲು ಸಾಧ್ಯವಾಗದೇ ಇದ್ದಾಗ ಮಗು ಆ ಕ್ರಿಯೆಯಲ್ಲಿ ನಂಬಿಕೆಯನ್ನು ಕಳೆದುಕೊಳ್ಳುತ್ತದೆ. ಮಗುವಿನ ಎಲ್ಲ ರೀತಿಯ ಪ್ರಶ್ನೆಗಳಿಗೆ ನಾವು ಉತ್ತರವನ್ನು ಕೊಡಲೇಬೇಕು. ನಮಗೆ ಗೊತ್ತಿದ್ದರೆ ಸರಿ.. ಅವರ ಪ್ರಶ್ನೆಗೆ ಉತ್ತರ ಕೊಡಬೇಕು. ಗೊತ್ತಿಲ್ಲದಿದ್ದರೆ ಮಕ್ಕಳ ಜೊತೆಯಲ್ಲಿಯೇ ಅವರನ್ನು ಒಳಗೊಂಡಂತೆ ಉತ್ತರವನ್ನು ಹುಡುಕಲು ಪ್ರಯತ್ನಿಸಬೇಕು. ನಂಬಿಕೆ ಇಲ್ಲದೆ ಇದ್ದಾಗ ಮಗು ಆ ಕ್ರಿಯೆಯಲ್ಲಿ ವಿಶ್ವಾಸವನ್ನು ಕಳೆದುಕೊಳ್ಳುತ್ತದೆ.

ಗಣೇಶನಿಗೆ 21 ಗರಿಕೆಯನ್ನು ಏರಿಸಬೇಕು.. ಆ ಗರಿಕೆಯನ್ನು ಏಕೆ ಏರಿಸಬೇಕು ಎಂಬುದರ ಕಾರಣವನ್ನು ನಾವು ಮಕ್ಕಳಿಗೆ ವಿವರಿಸಿದರೆ ಮುಂದಿನ ವರ್ಷದ ಗಣೇಶೋತ್ಸವದಲ್ಲಿ ಆ ಗರಿಕೆಯನ್ನು ನಾವು ಏರಿಸುವ ಮುನ್ನವೇ ಮಕ್ಕಳು ಏರಿಸುತ್ತಾರೆ. ಏಕೆ ಎಂಬುದನ್ನು ವಿವರಿಸಿದಾಗ ಅದು ಜ್ಞಾನವಾಗಿ ಪರಿವರ್ತನೆಯಾಗುತ್ತದೆ.




ಕುಳಿತು ಊಟ ಮಾಡಬೇಕು ಎಂಬುದರ ಹಿಂದಿನ ವೈಜ್ಞಾನಿಕ ಕಾರಣವನ್ನು ನಾವು ಹೇಳಿದಾಗ ಮಗು ಮರು ಪ್ರಶ್ನಿಸದೆ ಅದನ್ನು ಒಪ್ಪಿಕೊಂಡು ಪಾಲಿಸುತ್ತದೆ. ಕ್ರಿಯೆಯು ಜ್ಞಾನವಾಗಿ, ಜ್ಞಾನವು ನಂಬಿಕೆಯಾಗಿ, ನಂಬಿಕೆಯು ಪರಂಪರೆಯಾಗಿ ಬದಲಾಗುತ್ತದೆ.

ನಮ್ಮ ಮಕ್ಕಳು ನಮ್ಮ ಸನಾತನ ಧರ್ಮದ ಸಾರವನ್ನು ಅರಿತು ಅದನ್ನು ಮುಂದುವರಿಸಿಕೊಂಡು ಹೋಗಬೇಕು ಎಂಬ ಆಶಯವನ್ನು ನಾವು ಹೊಂದಿದ್ದರೆ ಅದರ ಕುರಿತು ಮಕ್ಕಳಿಗೆ ತಿಳಿಸಿ ಹೇಳುವ ಜ್ಞಾನ ಪಾಲಕರಿಗೆ ಇರಲೇಬೇಕು. ಜ್ಞಾನ ನಂಬಿಕೆಯನ್ನು ಹುಟ್ಟಿಸಿದರೆ, ನಂಬಿಕೆಯು ಕೆಲಸವನ್ನು ಕಾರ್ಯರೂಪಕ್ಕೆ, ಕೃತಿಯ ರೂಪಕ್ಕೆ ತರಲು ಸಹಾಯಕವಾಗುತ್ತದೆ.

ಪಾಲಕರು ತಮ್ಮ ಮಕ್ಕಳಿಗೆ ಪರೀಕ್ಷೆಯ ಸಮಯದಲ್ಲಿ ಬೇಗನೆ ಎದ್ದು ಓದಿಕೊಳ್ಳಲು ಹೇಳುತ್ತಾರೆ, ಆದರೆ ಮಕ್ಕಳು ಬೇಗನೆ ಎದ್ದು ಓದಿಕೊಳ್ಳುವ ಹಿಂದಿನ ಮಹತ್ವವನ್ನು ಮಕ್ಕಳಿಗೆ ತಿಳಿಸಿ ಹೇಳಿದರೆ ಮಕ್ಕಳು ತಂತಾನೆ ಪಾಲಕರ ಮಾತುಗಳನ್ನು ಕ್ರಿಯೆಯ ರೂಪಕ್ಕೆ ಇಳಿಸುತ್ತಾರೆ. ನಮ್ಮ ಪ್ರಯತ್ನವಿಲ್ಲದೆಯೇ ಮಕ್ಕಳು ನಮ್ಮ ಮಾತುಗಳನ್ನು ಕೇಳುತ್ತಾರೆ. ಇದಕ್ಕೆಲ್ಲ ಕಾರಣ ಜ್ಞಾನ.

ಜ್ಞಾನವು ನಮ್ಮ ಕುಟುಂಬವನ್ನು, ನಮ್ಮ ಮಕ್ಕಳಿಗೆ ಒಳ್ಳೆಯ ನಡುವಳಿಕೆಯನ್ನು ನಮ್ಮ ಸಂಸ್ಕಾರ ಮತ್ತು ಸಂಸ್ಕೃತಿಗಳನ್ನು ಉಳಿಸಲು ಅತ್ಯವಶ್ಯಕವಾಗಿರುತ್ತದೆ.

ಮಕ್ಕಳಿಗೆ ಜ್ಞಾನವನ್ನು ನೀಡುವ ನಿಟ್ಟಿನಲ್ಲಿ ನಾವು ಶ್ರಮಿಸಬೇಕಾಗಿದೆ. ಬದಲಾಗಿ ನಮ್ಮ ಅಹಂಕಾರದಿಂದ ಒತ್ತಡದಿಂದ ನನಗೆಲ್ಲವೂ ಗೊತ್ತಿದೆ ಎಂಬ ಅಹಂ ಭಾವದಿಂದ ನಾವು ಮಕ್ಕಳಲ್ಲಿ ನಂಬಿಕೆಯನ್ನು ಹುಟ್ಟಿಸಲು ಸಾಧ್ಯವಿಲ್ಲ.

ಪ್ರಸ್ತುತ ದಿನಗಳಲ್ಲಿ ಬಹಳಷ್ಟು ಮಕ್ಕಳು ನಮ್ಮ ಸಂಸ್ಕೃತಿ ಸಂಪ್ರದಾಯಗಳಿಂದ ಗಾವುದ ದೂರ ಇದ್ದಾರೆ. ನಮ್ಮ ಮಕ್ಕಳು ನಮ್ಮ ಕುಟುಂಬದ ಸಂಪ್ರದಾಯ ಸಂಸ್ಕೃತಿಗಳನ್ನು ಅನುಸರಿಸುತ್ತಿಲ್ಲ ಎಂದು ಅಲವತ್ತುಕೊಳ್ಳುವ



ಪಾಲಕರು ಈ ಹಿಂದೆ ತಾವು ಅವುಗಳನ್ನು ಅಸಡ್ಡೆ ಮಾಡಿರುವುದರ ಪರಿಣಾಮವೇ ತಮ್ಮ ಮಕ್ಕಳ ಇಂದಿನ ಪರಿಸ್ಥಿತಿಗೆ ಕಾರಣ ಎಂಬುದು ಗೊತ್ತಾಗಬೇಕು. ಮುಂದೆ ನಮ್ಮ ಮಕ್ಕಳು ಹೀಗೆ ವರ್ತಿಸಬಾರದು ಎಂಬ ಆಶಯ ನಮಗಿದ್ದರೆ ನಾವು ಪಾಲಕರಾದವರು ನಮ್ಮ ಮಕ್ಕಳಲ್ಲಿ ಸರಿಯಾದ ಮಾರ್ಗವನ್ನು ತಿಳಿಸಿ ಕೊಡುವ ಜ್ಞಾನವನ್ನು ಹೊಂದಿರಲೇಬೇಕು.

ತಮ್ಮ ಮಕ್ಕಳ ಬದುಕಿಗೆ ಅತ್ಯವಶ್ಯಕವಾದ ಜ್ಞಾನವನ್ನು ಕೊಡುವ ಸಾಮರ್ಥ್ಯ ಪಾಲಕರಲ್ಲಿ ಇದ್ದರೆ ನಮ್ಮ ಪರಂಪರೆ ಮತ್ತು ಸಂಪ್ರದಾಯಗಳನ್ನು ಉಳಿಸಲು ಸಾಧ್ಯ. ಆದ–್ದರಿಂದ ಪಾಲಕರೇ ಯಾವುದೇ ವಿಷಯವು ಕ್ರಿಯಾ ರೂಪದಲ್ಲಿ ಬರಬೇಕಾದರೆ ನಾವು ಮಕ್ಕಳಲ್ಲಿ ನಂಬಿಕೆಯನ್ನು ಹುಟ್ಟಿಸಬೇಕು ಮತ್ತು ಈ ನಂಬಿಕೆಯು ಮಕ್ಕಳಲ್ಲಿ ನಾವು ತುಂಬುವ ಜ್ಞಾನದ ಬಲದಿಂದ ಕಾರ್ಯನಿರ್ವಹಿಸಬೇಕು.

ಮನೆಯಲ್ಲಿ ಹಿರಿಯರಾದವರು ತಮ್ಮ ಮೊಮ್ಮಕ್ಕಳಿಗೆ ಪರಂಪರಾನುಗತವಾಗಿ ಬಂದ ಆಚರಣೆಗಳು ಕ್ರಿಯೆಗಳ ಮಹತ್ವವನ್ನು ತಿಳಿಸಿ ಹೇಳಲೇಬೇಕು. ಇದರಿಂದ ಮಕ್ಕಳಲ್ಲಿ ಆ ಕ್ರಿಯೆಗಳ ಕುರಿತು ನಂಬಿಕೆ ಮೂಡಿ ಅವರು ಆ ಕ್ರಿಯೆಗಳನ್ನು ತಾವು ಖುದ್ದು ಆಚ–ರಿಸುವುದಲ್ಲದೆ ಮುಂದಿನ ತಲೆಮಾರಿಗೆ ಕೂಡ ಈ ವಿಷಯಗಳನ್ನು ಕೊಂಡೊಯ್ಯುತ್ತಾರೆ.


**ಲೇಖನ**
**ವೀಣಾ ಹೇಮಂತ್ ಗೌಡ ಪಾಟೀಲ್**
**ಮುಂಡರಗಿ**
**ಗದಗ್ ಜಿಲ್ಲೆ**




---

# ಸಂಭ್ರಮದ ಶ್ರೀ ಶಂಕರಲಿಂಗ ಮಹಾ ರಥೋತ್ಸವ ಸಂಪನ್ನ



■ ಉದಯರಶ್ಮಿ ದಿನಪತ್ರಿಕೆ

ಇಂಡಿ: ತಾಲೂಕಿನ ಸುಕ್ಷೇತ್ರ ಲಚ್ಯಾಣದಲ್ಲಿ ಶ್ರೀ ಶಂಕರಲಿಂಗ ಮಹಾ ರಥೋತ್ಸವ ಬುಧವಾರ ಸಂಜೆ ಮೂಲಾ ನಕ್ಷತ್ರ ಶುಭ ಮೂಹೂರ್ತದಲ್ಲಿ ನೆರೆದ ಸಹಸ್ರಾರು ಭಕ್ತರ ಜಯಘೋಷದೊಂದಿಗೆ ಸಂಭ್ರಮದಿಂದ ನೆರವೇರಿತು. ಬಂಥ–ನಾಳದ ಪರಮಪೂಜ್ಯ ಡಾ. ವೃಷಭಲಿಂಗೇಶ್ವರ ಮಹಾಶಿವಯೋಗಿಗಳು, ಯರನಾಳದ ಪೂಜ್ಯ ಶ್ರೀ ಗುರು ಸಂಗನಬಸವ ಶ್ರೀಗಳು, ಇಟಗಿ ಪೂಜ್ಯರು, ಶಿರವಾಳದ ಸೋಮನಿಂಗ ಮಹಾರಾಜರು, ಸೇ–ರಿದಂತೆ ವಿವಿಧ ಪೂಜ್ಯರ ಸಾನಿಧ್ಯದಲ್ಲಿ ನಡೆದ ರಥ–ೋತ್ಸವ ನೋಡಿ ಕಣ್ಣು ತುಂಬಿಕೊಳ್ಳಲು ನೆರೆಯ ರಾಜ್ಯ ಮಹಾರಾಷ್ಟ್ರ ಆಂಧ್ರಪ್ರದೇಶ ತೆಲಂಗಾಣ ಸೇರಿದಂತೆ ರಾಜ್ಯದ ನಾನಾ ಭಾಗದ ಸಹಸ್ರಾರು ಭಕ್ತರು ಆಗಮಿಸಿದರು. ರಥೋತ್ಸದ ಸಂದರ್ಭದಲ್ಲಿ ಭಕ್ತರು ಬಾಳೆಹಣ್ಣು ಉತ್ತತ್ತಿ ಖಾರಿಕ ರಥದ ಮೇಲೆ ಎಸೆದು ಭಕ್ತಿಯ ಸಮರ್ಪಿಸಿದರು.

ರಥವು ಬಸವಣ್ಣ ಕಟ್ಟೆಯ ವರೆಗೆ ಚಲಿಸಿ ಮೂಲ ಸ್ಥಳ ತಲುಪಿತು.

# ಎಸ್ಸೆಸ್ಸೆಲ್ಸಿಯಲ್ಲಿಅಂಗನವಾಡಿ ಕಾರ್ಯಕರ್ತೆ ಮಗಳ ಸಾಧನೆ

■ ಉದಯರಶ್ಮಿ ದಿನಪತ್ರಿಕೆ



ಆಲಮೇಲ: ತಾಲೂಕಿನ ಕಡಣಿ ಗ್ರಾಮದಲ್ಲಿ ಅಂಗನವಾಡಿ ಕಾರ್ಯಕರ್ತೆಯಾಗಿ ಸೇವೆ ಸಲ್ಲಿಸುತ್ತಿರುವ ಶ್ರೀಮತಿ ಈರಮ್ಮ ಬಸವರಾಜ್ ಪಡಶೆಟ್ಟಿ ಹಾಗೂ ಬಸವರಾಜ ಪಡಶೆಟ್ಟಿ ಅವರ ಸುಪುತ್ರಿ ಕುಮಾರಿ ಐಶ್ವರ್ಯ ದ್ವಿತೀಯ ಪಿಯುಸಿ ವಿಜ್ಞಾನ ವಿಭಾಗದಲ್ಲಿ ಶೇ.90 ಪ್ರತಿಶತ ಫಲಿತಾಂಶ ಪಡೆಯುವ ಮೂಲಕ ಉತ್ತಮ ಸಾಧನೆ ಮಾಡಿದ್ದಾಳೆ.

ಕಡುಬಡತನದಲ್ಲಿ ಜನಿಸಿದ ಐಶ್ವರ್ಯ ಅವರ ತಂದೆ ಬಸವರಾಜ ಕೂಲಿ ಕಾರ್ಮಿಕರಾಗಿ ಕೆಲಸ ನಿರ್ವಹಿಸುತ್ತಾರೆ. ಇವರಿಗೆ ಸ್ವಂತ ಜಮೀನು ಕೂಡ ಇರುವುದಿಲ್ಲ. ಇಂಥ ಕಷ್ಟದ ಕುಟುಂಬದಲ್ಲಿ ಜನಿಸಿರುವ ಐಶ್ವರ್ಯ ಕಷ್ಟಪಟ್ಟು ಸಾಧನೆ ಮಾಡಿ ಗ್ರಾಮಸ್ಥರ ಮೆಚ್ಚುಗೆಗೆ ಪಾತ್ರರಾಗಿದ್ದಾಳೆ

ಈ ವಿದ್ಯಾರ್ಥಿನಿಯು 1 ನೇ ತರಗತಿಯಿಂದ 7ನೇ ತರಗತಿವರೆಗೆ ಬಡ ರೇಖೆ ಗಳಿಗಿಂತ ಕಡಿಮೆ ಇರುವ ವಿದ್ಯಾರ್ಥಿಗಳ ಆಯ್ಕೆಯಲ್ಲಿ ಆರ್ ಟಿ ಇ ಆಯ್ಕೆಯಾಗಿ ಆಲಮೇಲ ಆಯ್. ಕೆ .ರಾಯಲ್ ಶಾಲೆಯಲ್ಲಿ ವಿದ್ಯಾಭ್ಯಾಸ ಪಡೆದು 8 ತರಗತಿಯಿಂದ 10ನೇ ತರಗತಿಯವರೆಗೆ ಸಿಂದಗಿ ತಾಲೂಕಿನ ಗುಬ್ಬೆ ವಾಡ ಗ್ರಾಮದ ಮುರಾರ್ಜಿ ವಸತಿ ಶಾಲೆಯಲ್ಲಿ ವಿದ್ಯಾಭ್ಯಾಸ ಪಡೆದು ಪಿ ಯು ಸಿ ಅಭ್ಯಾಸವನ್ನು ವಿಜಯಪುರದ ಚೇತನ ಪಿಯು ಸೈನ್ಸ್ ಅಂಡ್ ಕಾಮರ್ಸ್ ಕಾಲೇಜಿನಲ್ಲಿ ಪಿಯುಸಿ ಪ್ರಥಮ ವರ್ಷ ಹಾಗೂ ದ್ವಿತೀಯ ವರ್ಷ ವಿದ್ಯಾಭ್ಯಾಸ ಮಾಡಿ 2025 –26 ನೇ ಸಾಲಿನ ಪಿಯುಸಿ ದ್ವಿತೀಯ ವರ್ಷದ ವಿಜ್ಞಾನ ವಿಭಾಗದ ಪರೀಕ್ಷೆಯಲ್ಲಿ 600 ಕ್ಕೆ 538 ಅಂಕಗಳಿಸಿ ತೇರ್ಗಡೆ ಹೊಂದಿರುವುದು ವಿದ್ಯಾರ್ಥಿನಿಯ ಉತ್ತಮ ಸಾಧನೆಗೆ ಸಾಕ್ಷಿಯಾಗಿದೆ.

ಕುಮಾರಿ ಐಶ್ವರ್ಯ ಬಸವರಾಜ್ ಪಡಶೆಟ್ಟಿ ಸಾಧನೆಗೆ ಮಾಡಿ ಕಡಣಿ ಗ್ರಾಮದ ಹೆಮ್ಮೆಯ ಕುವರಿ ಯಾಗಿರುವಳು.

ಆ ವಿದ್ಯಾರ್ಥಿಯ ಸಾಧನೆಗೆ ಗ್ರಾಮಸ್ಥರು, ಶಾಲೆಯ ಮುಖ್ಯಸ್ಥರು, ಶಿಕ್ಷಕ ಬಳಗ,

ಬಂದು ಮಿತ್ರರು ಹಾಗೂ ಸ್ನೇಹಿತರು ಶುಭ ಹಾರೈಸಿದ್ದಾರೆ.

# ಎಕ್ಸಲಂಟ್ ಪ.ಪೂ ಕಾಲೇಜ್: ಶೇ99.58 ಫಲಿತಾಂಶ, 438 ಡಿಸ್ಟಿಂಕ್ಷನ್

## ದ್ವಿತೀಯ ಪಿಯುಸಿ ಫಲಿತಾಂಶದಲ್ಲಿ ಅಮೋಘ ಸಾಧನೆ ಮಾಡಿದ ವಿಜಯಪುರದ ಎಕ್ಸಲಂಟ್ ವಿಜ್ಞಾನ ಪ.ಪೂ ಕಾಲೇಜು

■ ಉದಯರಶ್ಮಿ ದಿನಪತ್ರಿಕೆ

ವಿಜಯಪುರ: ಪ್ರಸಕ್ತ ಸಾಲಿನ ಬಹು ನಿರೀಕ್ಷಿತ ಪಿಯುಸಿ ದ್ವಿತೀಯ ವರ್ಷದ ಫಲಿತಾಂಶ ಪ್ರಕಟಗೊಂಡಿದ್ದು ವಿಜಯಪುರ ನಗರದ ಪ್ರತಿಷ್ಠಿತ ಎಕ್ಸಲಂಟ್ ಪದವಿ ಪೂರ್ವ ವಿಜ್ಞಾನ ಕಾಲೇಜಿನ ವಿದ್ಯಾರ್ಥಿಗಳು ಅತ್ಯುತ್ತಮ ಅಂಕಗಳನ್ನು ಪಡೆದುಕೊಳ್ಳುವ ಮೂಲಕ ಕಾಲೇಜಿಗೆ ಕೀರ್ತಿ ತಂದಿರುತ್ತಾರೆ. ಅದರಲ್ಲಿ ಅನುಷ್ಕಾ ಮಹಿಶಾಳೆ 600 ಕ್ಕೆ 588 ಅಂಕಗಳನ್ನು ಪಡೆಯುವುದರೊಂದಿಗೆ ಕಾಲೇ–ಜಿಗೆ ಪ್ರಥಮ ಸ್ಥಾನಪಡೆದರೆ, ನಿಖಿಲ ಕಿತ್ತೂರ 585 ಅಂಕಗಳೊಂದಿಗೆ ದ್ವಿತೀಯ ಸ್ಥಾನ, ಪ್ರತೀಕ ಚವ್ಹಾಣ ಹಾಗೂ ಅಂಜನಾ ಹೊನ್ನುಂಗುರ 584 ಅಂಕಗಳನ್ನು ಪಡೆದುಕೊಳ್ಳುವ ಮೂಲಕ ತೃತೀಯ ಸ್ಥಾನವನ್ನು ಹಂಚಿಕೊಂಡಿದ್ದಾರೆ. ಉಳಿದಂತೆ ಮಲ್ಲಿಕಾರ್ಜುನ ಮುಚ್ಚಂಡಿ(582), ಅಕ್ಷತಾ ದೊಡ್ಡಮನಿ (582), ರಕ್ಷಿತಾ ಬಿರಾದಾರ (582), ಅಮನ್ ಮದಬಾವಿ(581), ಶ್ರೇಯಾ ಗಂಗರಗೊಂಡ(581) ಶ್ರೇಯಾ ಮುರುಗುಂಡೆ (580), ಸಹನಾ ಮಾವಿನಗಿಡದ(579), ಅಮರ್ ಇರಕಲ್(579), ಧರಣಿ ಜ್ಯೋಷಿ(579), ಸಾವಿತ್ರಿ ಸುನೀಲ್ ಪಾಟೀಲ(579), ಅನುಶ್ರಿ ಬಿರಾದಾರ (578), ಸುದೀಪ ದೊರನಳ್ಳಿ (578), ವೈಷ್ಣವಿ ಚಿಮ್ಮಲಗಿ(578), ಶ್ರೇಯಾ ತೋಪಲಕಟ್ಟಿ (577), ಗಣೇಶ ಕನ್ನೊಳ್ಳಿ (577), ಮದನಗೌಡ ಝಳಕಿ (577), ಸುಜನ್ ಮಾಂಡವಕರ್(576), ಅಂಜಲಿ ಹಟ್ಟಿ (576), ಸೌಜನ್ಯ ಸುನೀಲ್ ಪ್ರಕಾಶ (576), ಸ್ಫೂರ್ತಿ ಬಿರಾದಾರ (576), ಅರ್ಪನೂರ್ ಕರ್ಜಗಿ (576), ಸೇರಿದಂತೆ ವಿದ್ಯಾರ್ಥಿಗಳು ಅತೀ ಹೆಚ್ಚು ಅಂಕಗಳನ್ನು ಪಡೆದುಕೊಂಡಿರುತ್ತಾರೆ.

ಗುಣಮಟ್ಟದ ಶಿಕ್ಷಣದ ಮೂಲಕ ಗುರುತಿಸಿಕೊಂಡಿರುವ ಕಾಲೇಜಿನಿಂದ ಪರೀಕ್ಷೆಗೆ ಹಾಜರಾಗಿದ 718 ವಿದ್ಯಾರ್ಥಿಗಳ ಪೈಕಿ 715 ವಿದ್ಯಾರ್ಥಿಗಳು ಉತ್ತೀರ್ಣರಾಗಿದ್ದು ಅದರಲ್ಲಿ 438 ಡಿಸ್ಟಿಂಗ್ಷನ್, 273 ಪ್ರಥಮ ದರ್ಜೆ ಹಾಗೂ 4 ವಿದ್ಯಾರ್ಥಿಗಳು ದ್ವಿತೀಯ ದರ್ಜೆಯಲ್ಲಿ ತೇರ್ಗಡೆಯಾಗಿದ್ದು ಒಟ್ಟು 99.58 ಪ್ರತಿಷತ ಫಲಿತಾಂಶವನ್ನು ದೊರೆತಿರುತ್ತದೆ. ಗಣೀತದಲ್ಲಿ 79, ಭೌತಶಾಸ್ತ್ರದಲ್ಲಿ 12, ಕಂಪ್ಯೂಟರ್ ಸೈನ್ಸನಲ್ಲಿ 39, ಜೀವಶಾಸ್ತ್ರದಲ್ಲಿ 05, ಕನ್ನಡದಲ್ಲಿ 05 ಹಾಗೂ ಸಂಸ್ಕೃತದಲ್ಲಿ ಒಬ್ಬ ಸೇರಿದಂತೆ ಹೆಚ್ಚಿನ ವಿದ್ಯಾರ್ಥಿಗಳು ನೂರಕ್ಕೆ ನೂರು ಅಂಕಗಳನ್ನು ಪಡೆದುಕೊಂಡು ಅತ್ಯತ್ತಮ ಸಾಧನೆ ಮಾಡಿರುತ್ತಾರೆ.

ಮಕ್ಕಳ ಈ ಸಾಧನೆಗೆ ಕಾಲೇಜಿನ ಪ್ರಾಂಶುಪಾಲ ಮಂಜುನಾಥ ಜುನಗೊಂಡ ಸೇರಿದಂತೆ ಆಡಳಿತ ಮಂಡಳಿಯ ಸರ್ವ ಸದಸ್ಯರು, ಸರ್ವ ಬೋಧಕ ಬೋಧಕೇತರ ಸಿಬ್ಬಂದಿಗಳು ಶುಭ ಹಾರೈಸಿದ್ದಾರೆ.



### ಹೆತ್ತರವರ ಕನಸು ಈಡೇರಿಸಿ :ಕೌಲಗಿ

ವಿದ್ಯಾರ್ಥಿಗಳ ಈ ಸಾಧನೆಗೆ ಹರ್ಷ ವ್ಯಕ್ತಪಡಿಸಿದ ಎಕ್ಸಲಂಟ್ ಸಮೂಹ ಶಿಕ್ಷಣ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಬಸವರಾಜ್ ಕೌಲಗಿ ಅವರು, ಈ ಪರೀಕ್ಷೆಯ ನಂತರದಲ್ಲಿ ಎದುರಾಗುವ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಾಗುವ ಮೂಲಕ ಮಕ್ಕಳು ಇನ್ನೂ ಹೆಚ್ಚಿನ ಸಾಧನೆಯನ್ನು ಮಾಡಿ ಹೆತ್ತರವರ ಕನಸನ್ನು ಈಡೇರಿಸಬೇಕು ಎಂದು ಹೇಳಿದರು.



# ಕಲಕೇರಿ ಎ.ಕೆ.ಸಿರಸಗಿ ಪಿಯು ಕಾಲೇಜು ಅತ್ಯುತ್ತಮ ಸಾಧನೆ

■ ಉದಯರಶ್ಮಿ ದಿನಪತ್ರಿಕೆ







ಕಲಕೇರಿ: ಗ್ರಾಮದ ಎಂ.ಡಬ್ಲ್ಯೂ.ಎಮ್.ಎಸ್ ಮತ್ತು ಆರ್.ಎಸ್.ಡಬ್ಲ್ಯು ಟ್ರಸ್ಟ್ನ ಅಡಿಯಲ್ಲಿ ನಡೆಯುತ್ತಿರುವ ಎ. ಕೆ. ಸಿರಸಗಿ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು 2026ನೇ ಸಾಲಿನ ದ್ವಿತೀಯ ಪಿಯುಸಿ ಕಲಾ ಮತ್ತು ವಿಜ್ಞಾನ ವಿಭಾಗದಲ್ಲಿ ಅತ್ಯುತ್ತಮ ಸಾಧನೆ ಮಾಡಿದ್ದಾರೆ.

ಕು. ಮಹ್ಮದ ಯಾಸೀನ ಹೊನ್ನಳ್ಳಿ 578 (96.33%) ಅಂಕಗಳೊಂದಿಗೆ ಕಾಲೇಜಿಗೆ ಪ್ರಥ–ಮ ಸ್ಥಾನ ಪಡೆದಿದ್ದು, ಕುಮಾರಿ ಶಾರದಾ ಬಿ. 569 (94.83%) ದ್ವಿತೀಯ ಸ್ಥಾನ ಹಾಗೂ ಕುಮಾರಿ ತಮನ್ನಾ ಜೆ. 565 (94.16%) ತೃತೀಯ ಸ್ಥಾನ ಪಡೆದುಕೊಂಡಿದ್ದಾರೆ.

ಪರೀಕ್ಷೆಗೆ ಕುಳಿತ 30ಕ್ಕೂ ಹೆಚ್ಚು ವಿದ್ಯಾರ್ಥಿಗಳು ಉನ್ನತ ಶ್ರೇಣಿಯಲ್ಲಿ ಪಾಸಾಗಿದ್ದು, ವಿದ್ಯಾರ್ಥಿ ಗಳು ಹೆಚ್ಚಿನ ಅಂಕಗಳೊಂದಿಗೆ ತೇರ್ಗಡೆಯಾಗಿರುವುದ–ರಿಂದ ಸಂಸ್ಥೆಯ ಆಡಳಿತ ಮಂಡಳಿಯ ಸದಸ್ಯರು, ಪ್ರಾಚಾರ್ಯರು, ಉಪನ್ಯಾಸಕರು ಹಾಗೂ ಕಾಲೇಜಿನ ಸಿಬ್ಬಂದಿವರ್ಗ ವಿದ್ಯಾರ್ಥಿಗಳ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.



# ರಾಯಲ್ ಕಾಲೇಜು ಉತ್ತಮ ಸಾಧನೆ ವಿಜ್ಞಾನ ವಿಭಾಗ ಶೇ.98 ಫಲಿತಾಂಶ

■ ಉದಯರಶ್ಮಿ ದಿನಪತ್ರಿಕೆ

ಅಫಜಲಪುರ: ದ್ವಿತಿಯ ಪಿಯು ಫಲಿತಾಂಶ ಹೊರ ಬಂದಿದ್ದು ಪಟ್ಟಣದಲ್ಲಿರುವ ಪ್ರತಿಷ್ಠಿತ ರಾಯಲ್ ಪಬ್ಲಿಕ್ ವಿಜ್ಞಾನ ಮತ್ತು ಕಲಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ಉತ್ತಮ ಅಂಕಗಳನ್ನು ಪಡೆದುಕೊಂಡು ಕಾಲೇಜಿನ ಗೌರವ ಹೆಚ್ಚಿಸಿದ್ದಾರೆ.

ಕಾಲೇಜಿನ ವಿದ್ಯಾರ್ಥಿಗಳ ಪೈಕಿ ನಾಲ್ವರು ಡಿಸ್ಟಿಂಕ್ಷನ್ ನಲ್ಲಿ ಪಾಸಾಗಿದ್ದು 29 ವಿದ್ಯಾರ್ಥಿಗಳು ಪ್ರಥಮ ಶ್ರೇಣಿಯಲ್ಲಿ ತೇರ್ಗಡೆಗೊಂಡಿದ್ದಾರೆ. 13 ವಿದ್ಯಾರ್ಥಿಗಳು ಸೆಕೆಂಡ್ ಕ್ಲಾಸ್ ನಲ್ಲಿ ಪಾಸಾಗುವ ಮೂಲಕ ಸಾಧನೆ ಮಾಡಿದ್ದಾರೆ. ಕಾಲೇಜಿನ ವಿದ್ಯಾರ್ಥಿ ಸುದೀಪ್ ಬಸವರಾಜ ರಾಠೋಡ 552 ಅಂಕಗಳನ್ನು ಪಡೆದು 92 ಪ್ರತಿಶತದೊಂದಿಗೆ ಪಾಸಾಗಿ ಕಾಲೇಜಿಗೆ ಮೊದಲ ಸ್ಥಾನ ಪಡೆದುಕೊಂಡಿದ್ದಾನೆ. ಶಭನಮ್ ಸಾಹೇಬ್‌ಪಟೇಲ್ 543 ಅಂಕಗಳೊಂದಿಗೆ 90.5 ಪ್ರತಿಶತದೊಂದಿಗೆ ತೇರ್ಗಡೆಯಾಗಿ ಕಾಲೇಜಿಗೆ ದ್ವಿತಿಯ ಸ್ಥಾನ ಪಡೆದುಕೊಂಡಿದ್ದಾಳೆ. ಉಳಿದಂತೆ ಮಿಜ್ಬಾ ಅಶ್ಪಾಕ್ 539 (89.8), ಸುಲೇಮನ್ ಮಹಿಬೂಬ್ 510 (85), ಅರುಣಕುಮಾರ ಶ್ರೀಶೈಲ್ 504 (84), ಐಶ್ವರ್ಯ ಮಲ್ಲಿನಾಥ 502 (83.6), ಮಹಮ್ಮದ್ ಹಸೀಬ್ 482 (80.3), ಅವಿನಾಶ ಬಸವರಾಜ 478 (79.6) ಜಿಶಾನ್ ರಶೀದ್ 471 (78.5), ಸುಫಿಯಾ ಫಿರ್ದೋಸ್ 467 (77), ಸಂಜೋತಾ ಶರಣು 461 (76.8), ಲಕ್ಷ್ಮೀ ಗಾಲಪ್ಪ 456 (76) ಪ್ರತಿಶತದೊಂದಿಗೆ ತೇರ್ಗಡೆ ಹೊಂದುವ ಮೂಲಕ ಕಾಲೇಜಿನ ಗೌರವ ಹೆಚ್ಚಿಸಿದ್ದಾರೆ.

# ಓಒಒಖ ಪರೀಕ್ಷೆ: ಕೀರ್ತಿ ಹೊರಟ್ಟಿ ತಾಲೂಕಿಗೆ ಪ್ರಥಮ

■ ಉದಯರಶ್ಮಿ ದಿನಪತ್ರಿಕೆ

ಕೊಲ್ಹಾರ: ತಾಲೂಕಿನ ಕುಪಕಡ್ಡಿ ಗ್ರಾಮದ ಸರಕಾರಿ ಹಿರಿಯ ಪ್ರಾಥಮಿಕ ಶಾಲೆಯ ವಿದ್ಯಾರ್ಥಿನಿ ಕೀರ್ತಿ ಶಿವಪ್ಪ ಹೊರಟ್ಟಿ ಅವರು 2025–26ನೇ ಸಾಲಿನ ಓಒಒಖ ಪರೀಕ್ಷೆಯಲ್ಲಿ 114 ಅಂಕಗಳನ್ನು ಪಡೆದು ಬಸವನ ಬಾಗೇವಾಡಿ ತಾಲೂಕಿಗೆ ಪ್ರಥ–ಮ ಸ್ಥಾನ ಪಡೆದು ಶಾಲೆಯ ಕೀರ್ತಿಯನ್ನು ಹೆಚ್ಚಿಸಿದ್ದಾಳೆ. ಕಳೆದ ಫೆಬ್ರವರಿ ತಿಂಗಳಲ್ಲಿ ನಡೆದ ಈ ಪರೀಕ್ಷೆಯಲ್ಲಿ ಗ್ರಾಮೀಣ ಭಾಗದ ಸರಕಾರಿ ಶಾಲೆಯ ವಿದ್ಯಾರ್ಥಿನಿಯಾಗಿ ಈ ಸಾಧನೆ ಮಾಡಿರುವುದು ವಿಶೇಷವಾಗಿದೆ.



ಅದೇ ಶಾಲೆಯ ಇತರೆ ವಿದ್ಯಾರ್ಥಿಗಳೂ ಉತ್ತಮ ಸಾಧನೆ ತೋರಿದ್ದು, ಗಾಯತ್ರಿ ಬಡಿಗೇರ 92, ಅಪೇಕ್ಷಾ ಕೋಲಕಾರ 86, ಮಲ್ಲಪ್ಪ ಬಿಜ್ಜರಗಿ 84, ಸಾಕ್ಷಿ ಮ್ಯಾಗೇಡಿ 81 ಹಾಗೂ ಲಕ್ಷ್ಮೀ ತಿಳಗುಳ 77 ಅಂಕಗಳನ್ನು ಪಡೆದುಕೊಂಡಿದ್ದಾರೆ.

ಮಕ್ಕಳ ಈ ಸಾಧನೆಗೆ ಕ್ಷೇತ್ರ ಶಿಕ್ಷಣಾಧಿಕಾರಿ ವಸಂತ ರಾಠೋಡ, ಸಮನ್ವಯಾಧಿಕಾರಿ ಸುನೀಲ ನಾಯಕ, ಓಒಒಖ ತಾಲೂಕು ನೋಡಲ್ ಅಧಿಕಾರಿ ಅನುಜಾ ಗುಬ್ಬಾ ಸೇರಿದಂತೆ ಶಾಲಾ ಅಧ್ಯಕ್ಷ ಮುರಗೇಶ ಹಳ್ಳಿ, ಮುಖ್ಯಗುರು ಸಿದ್ದಪ್ಪ ಕೋಟ್ಯಾಳ ಹಾಗೂ ಶಿಕ್ಷಕರಾದ ಹಣಮಂತ ಬಿರಾದಾರ, ಸಂಗಮೇಶ ಎಲಬಳ್ಳಿ, ಶಾಂತಪ್ಪ ನಾಗರಳ್ಳಿ, ಕವಿತಾ ಹಿರೇಮಠ, ಹೇಮಾವತಿ, ಲಕ್ಷ್ಮೀ ವನೇಶಿ, ಅನೀಲ ಗಣಿ ಸೇರಿದಂತೆ ಸಮಸ್ತ ಗ್ರಾಮಸ್ಥರು ಅಭಿನಂದನೆ ಸಲ್ಲಿಸಿದ್ದಾರೆ.

# ಸಿಡಿಪಿಒ ವಿರುದ್ಧ ಶಿಸ್ತುಕ್ರಮಕ್ಕೆ ಆಗ್ರಹ



ಜೇವರ್ಗಿ: ಗ್ಯಾರಂಟಿ ಅನುಷ್ಠಾನ ಸಮಿತಿ ಸಭೆಯ ನಿರ್ಣಯಗಳನ್ನು ಸಮಗ್ರವಾಗಿ ಜಾರಿ ಮಾಡದೇ ಉಲ್ಲಂಘಿಸಿರುವ ಶಿಶು ಅಭಿವೃದ್ಧಿಯೋಜನಾಧಿಕಾರಿ ವಿರುದ್ಧಶಿಸ್ತು ಕ್ರಮ ಜರುಗಿಸುವಂತೆ ಅನುಷ್ಠಾನ ಸಮಿತಿ ಸದಸ್ಯರು ಆಗ್ರಹಿಸಿದರು.

ಪಟ್ಟಣದ ಗ್ಯಾರಂಟಿ ಅನುಷ್ಠಾನ ಸಮಿತಿ ಕಚೇ–ರಿಯ ಸಭಾಂಗಣದಲ್ಲಿ ಮಂಗಳವಾರ ನಡೆದ ಪ್ರಗತಿ ಪರಿಶೀಲನಾ ಸಭೆಯಲ್ಲಿ 'ಸಮಿತಿ ಸದಸ್ಯರು, ಮಹಿಳಾ ದಿನಾಚರಣೆಯಲ್ಲಿ ಅನುಷ್ಠಾನ ಸಮಿತಿ ಜಿಲ್ಲಾಧ್ಯಕ್ಷರಿಗೆ ಶಿಷ್ಟಾಚಾರ ಪ್ರಕಾರ ಕಾರ್ಯಕ್ರಮ ನಿರ್ವಹಿಸಿದೇ ಅಗೌರವ ತೋರಲಾಗಿದೆ' ಎಂದು ಅರೋಪಿಸಿದರು.

'ಏ.6 ರಂದು ಕಾರ್ಯಾಗಾರ ನಡೆಸಲು ತೀರ್ಮಾನಿಸಲಾಗಿತ್ತು, ಮುಂಚಿತವಾಗಿ ಮಾಹಿತಿ ನೀಡದೇ ರದ್ದುಪಡಿಸಲಾಯಿತು. ಇಲಾಖೆಯ ಯಾವುದೇ ಕಾರ್ಯಕ್ರಮಗಳಿಗೆ ಸಮಿತಿ ಅಧ್ಯಕ್ಷರಿಗೆ ಹಾಗೂ ಸದಸ್ಯರಿಗೆ ಆಹ್ವಾನ ನೀಡದೇ ಅಗೌರವ ತೋರುತ್ತಿದ್ದಾರೆ' ಎಂದು ಸದಸ್ಯರು ಅಸಮದಾನ ವ್ಯಕ್ತಪಡಿಸಿದರು. ನಂತರ 7 ದಿನಗಳ ಒಳಗಾಗಿ ಕಾರಣ ಕೇಳಿ ನೋಟಿಸ್ ಜಾರಿ ಮಾಡಲಾಯಿತು.

ಸಭೆಯ ಅಧ್ಯಕ್ಷತೆ ವಹಿಸಿದ್ದಜೇವರ್ಗಿ ಪಟ್ಟಣದ ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ಕಚೇರಿಯ ಸಭಾಂಗಣದಲ್ಲಿ ಗ್ಯಾರಂಟಿಗಳ ಪ್ರಗತಿ ಪರಿಶೀಲನಾ ಸಭೆ ನಡೆಸಲಾಯಿತು ಅನುಷ್ಠಾನ ಸಮಿತಿ ಅಧ್ಯಕ್ಷ ಶೌಕತ್ ಅಲಿ ಅಲೂರ ಮಾತನಾಡಿ, 'ಹೊಸ ಪಡಿತರ ಚೀಟಿಗಾಗಿ 370 ಜನ ಅರ್ಜಿ ಸಲ್ಲಿಸಿದ್ದಾರೆ. ಫಲಾನುಭವಿಗಳಿಂದ ಹೆಚ್ಚಿನ ಹಣ ಪಡೆದು ಸರ್ಕಾರದ ಮಾನದಂಡಗ–ಳನ್ನು ಗಾಳಿಗೆ ತೂರಿ ಪಡಿತರ ಚೀಟಿ ನೀಡಲಾಗುತ್ತಿದೆ ಎಂಬ ಆರೋಪ ಕೇಳಿ ಬಂದಿದ್ದು, ಫಲಾನುಭವಿಗಳು ಪಡಿತರ ಚೀಟಿಗಾಗಿ ಸಲ್ಲಿಸಿರುವ ದಾಖಲಾತಿ ವಿವರ ನೀಡುವಂತೆ ಆಹಾರ ಇಲಾಖೆಯ ಅಧಿಕಾ–ರಿಗಳಿಗೆ ಸೂಚಿಸಿ, ಅಧಿಕಾರಿಗಳು ಪಂಚ ಗ್ಯಾರಂಟಿ ಯೋಜನೆಗಳು ಸಮಗ್ರವಾಗಿ ಜಾರಿಗೊಳಿಸಲು ಬದ್ಧರಾ ಗಿರಬೇಕು. ಅಧಿಕಾರಿಗಳು ಗ್ಯಾರಂಟಿಗಳಕು–ರಿತು ನಿರ್ಲಕ್ಷ್ಯ ತೋರದೆ ನಿಗದಿತ ಗುರಿಯೊಂದಿಗೆ ಕೆಲಸ ಮಾಡಬೇಕು' ಎಂದುತಾಕೀತುಮಾಡಿದರು.

ಸಭೆಯಲ್ಲಿ ತಾ.ಪಂ 22 ರವಿಚಂದ್ರ ರೆಡ್ಡಿ, ಸಮಿತಿ ಸದಸ್ಯರಾದ ಅಂಜನಾಬಾಯಿ ರಾಠೋಡ, ರಾಜು ಗುತ್ತೇದಾರ, ರುಕುಂ ತೋಲಾ ಬಾಗವಾನ, ನಾಗರಾಜ ಬಸವರಾಜ ದೇವದುರ್ಗ, ಗುರುಲಿಂಗಪ್ಪಗೌಡ ಪಾಟೀಲ, ಸಿದ್ದು ಮಾವನೂರ, ಸಂತೋಷ ಜೈನಾಪೂರ ಸೇರಿದಂತೆ ಆಹಾರ, ಸಾರಿಗೆ, ಯುವನಿಧಿ ಸೇರಿದಂತೆ ಐದು ಇಲಾಖೆಯ ಅಧಿಕಾರಿಗಳು ಹಾಜರಿದ್ದರು

# ಎನ್.ವಿ. ಕಾಲೇಜು ವಿದ್ಯಾರ್ಥಿಗಳ ಸೇವಾ ಮನೋಭಾವ ಅನುಕರಣೀಯ : ಡಾ. ಕರಿಗೂಳೇಶ್ವರ

ಕಲಬುರಗಿ:ಇಂದು ಹೆಚ್ಚಿನ ಮಹಾವಿದ್ಯಾಲಯಗಳಲ್ಲಿ ಎನ್.ಎಸ್.ಎಸ್. ಘಟಕಗಳಿವೆ. ಆದರೆ ಎನ್.ವಿ. ಕಾಲೇಜಿನ ಶಿಬಿರಾರ್ಥಿಗಳು ಅಳವಡಿಸಿಕೊಂಡಿರುವ ಸೇವಾ ಮನೋಭಾವ ಅನುಕರಣೀಯ ಹಾಗೂ ಶ್ಲಾಘನೀಯ

ಎಂದು ಡಾ. ಕರಿಗೂಳೇಶ್ವರ ಹೇಳಿದರು.

ಕಲಬುರಗಿ ಏಪ್ರಿಲ್ 06: ಇಂದು ಕಲುಬುರಗಿ ತಾಲೂಕಿನ ಔರಾದ(ಬಿ) ಗ್ರಾಮದ ಶ್ರೀಸ್ವಾಮಿಸಮರ್ಥ–ರ್ಥ ದೇವಸ್ಥಾನದ ಆವರಣದಲ್ಲಿ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯ, ಆಯ್.ಕ್ಯು.ಎ.ಸಿ. ಹಾಗೂ ಗುಲಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ ರಾಷ್ಟ್ರೀಯ ಸೇವಾ ಯೋಜನೆಯ ಕೋಶದ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಮಹಾಗಾಂವ್ ಕ್ರಾಸ್ ನ ಪದವಿ ಮಹಾವಿದ್ಯಾಲಯದ ಸಹಪ್ರಾಧ್ಯಾಪಕರಾದ ಡಾ. ಕರಿಗೂಳೇಶ್ವರ ಅವರು ಮಾತನಾಡಿ ಎನ್.ಎಸ್.ಎಸ್.ಶಿಬಿರಗಳು ಹಸಿವಿನ ಮಹತ್ವ, ಸಮಯ ಪಾಲನೆ ಕುರಿತು ತಿಳಿಸಿಕೊಡುತ್ತವೆ. ಇಂಥ ಶಿಬಿರಗಳು ವಿದ್ಯಾರ್ಥಿಗಳಲ್ಲಿ ಅಡಗಿರುವ ಪ್ರತಿಭೆಗಳನ್ನು ಹೊರತರುವ ಕಾರ್ಯಗಾರಗಳಾಗಿವೆ ಎಂದು ಹೇಳಿದರು. ಅಧ್ಯಕ್ಷತೆಯನ್ನು ವಹಿಸಿದ್ದ ನೂತನ ವಿದ್ಯಾಲಯ ಸಂಸ್ಥೆಯ ಕಾಲೇಜು ಶೈಕ್ಷಣಿಕ ಮಂಡಳಿಯ ಸದಸ್ಯರಾದ ಡಾ. ಸದಾಶಿವ ಆರ್. ಜಿಡಗೀಕರ್ ಅವರು ಮಾತನಾಡಿ ಶಿಬಿರಾರ್ಥಿಗಳು ಮಾನವೀಯ ಮೌಲ್ಯಗಳನ್ನು ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಲು ಇಂಥ ರಾಷ್ಟ್ರೀಯ ಸೇವಾ ಯೋಜನೆಯ ಶಿಬಿರಗಳು ನೆರವಾಗುತ್ತವೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಆಗಮಿಸಿದ್ದ ಶ್ರೀಮತಿ ಮೋಹಿನಿ ಸದಾಶಿವ ಜಿಡಗೀಕರ್ ಅವರು ಮಾತನಾಡಿದರು. ವೇದಿಕೆಯ ಮೇಲೆ ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿ ಡಾ. ದಯಾನಂದ ಎಂ. ಶಾಸ್ತ್ರಿ, ಶ್ರೀಕಾಂತ್ ಪಂಡಿತ ಹಾಗೂ ಡಾ. ಮಲ್ಲಿನಾಥ ಎಸ್. ತಳವಾರ ಉಪಸ್ಥಿತರಿದ್ದರು.




ರಾಷ್ಟ್ರೀಯ ಸೇವಾ ಯೋಜನೆಯ ವಿಶೇಷ ಶಿಬಿರದ ಸಮಾರೋಪ ಸಮಾರಂಭದಲ್ಲಿ ಅರವತ್ತು ಶಿಬಿರಾರ್ಥಿಗಳು ಭಾಗವಹಿಸಿದ್ದರು. ಕುಮಾರಿ ಸ್ಫೂರ್ತಿ ಮತ್ತು ಕುಮಾರಿ ಪ್ರೀತಿ ಎನ್.ಎಸ್.ಎಸ್. ಗೀತೆ ಹಾಡಿದರು. ಆನಂದ, ಸ್ಫೂರ್ತಿ, ಸಾಕ್ಷಿ, ಭರತ್ ಪಾಟೀಲ್, ಸ್ಫೂರ್ತಿ ವಿದ್ಯಾರ್ಥಿಗಳು ತಮ್ಮ ಅನಿಸಿಕೆ –ಅಭಿಪ್ರಾಯಗಳನ್ನು ಹಂಚಿಕೊಂಡರು. ಪ್ರೊ. ಶ್ರೀಕಾಂತ ಪಂಡಿತ ಪ್ರಾಸ್ತಾವಿಕ ಹಾಗೂ ಸ್ವಾಗತ ಭಾಷಣ ಮಾಡಿದರು. ಡಾ. ಮಲ್ಲಿನಾಥ ಎಸ್. ತಳವಾರ ನಿರೂಪಿಸಿದರು. ನೂತನ ವಿದ್ಯಾಲಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯರು ಹಾಗೂ ಎನ್.ಎಸ್.ಎಸ್. ಅಧಿಕಾರಿ ಡಾ. ದಯಾನಂದ ಎಂ. ಶಾಸ್ತ್ರಿಯವರು ವಂದಿಸಿದರು.

# ಅಹಿಂದ ನಾಯಕರ ಬೆಂಬಲವಿಲ್ಲದೆ ಎಂ ವೈ ಪಾಟೀಲ್ ಗೆದ್ದು ತೋರಿಸಲಿ : ಜಮೀಲ್ ಗೌಂಡಿ

ಅಫಜಲಪೂರ: ತಾಲೂಕು ಕಾಂಗ್ರೆಸ್ ಪಾಳೆಯದಲ್ಲಿ ಒಳಜಗಳ ತೀವ್ರಗೊಂಡಿದ್ದು, ಕಾರ್ಯಕರ್ತರ ಅಸಮಾಧಾನ ಬಹಿರಂಗವಾಗಿದೆ. ಮಾಜಿ ಸಚಿವ ಮಾಲೀಕಯ್ಯಾ ಗುತ್ತೇದಾರ, ಜೇ.ಎಂ. ಕೊರಬು ಹಾಗೂ ಶಾಸಕರ ಬೆಂಬಲಿಗರ ನಡುವೆ ಶೀತಲ ಸಮರ ಮುಂದುವರೆದಿದ್ದು, ಇದು ಇದೀಗ ಸಾರ್ವಜನಿಕವಾಗಿ ಸ್ಫೋಟಗೊಂಡಿದೆ.

ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ರಮೇಶ್ ಪೂಜಾರಿ ಅವರು ಸಮಸ್ಯೆಗಳನ್ನು ಸಮನ್ವಯಗೊಳಿಸುವಲ್ಲಿ ವಿಫಲರಾಗಿದ್ದಾರೆ ಎಂಬ ಗಂಭೀರ ಆರೋಪ ಕೇಳಿಬಂದಿದೆ. ಪಕ್ಷದ ಹಿರಿಯ ನಾಯಕರು ಹಾಗೂ ನೆಲಮಟ್ಟದ ಕಾರ್ಯಕರ್ತರೊಂದಿಗೆ ಸಮಾಲೋಚನೆ ನಡೆಸದೆ ಶಾಸಕರ ಸುಪುತ್ರ ಏಕಪಕ್ಷೀಯ ನಿರ್ಧಾರಗಳನ್ನು ತೆಗೆದುಕೊಳ್ಳಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತವಾಗಿದೆ.

ಮಾಲೀಕಯ್ಯಾ ಗುತ್ತೇದಾರ ಹಾಗೂ ಮಕಬುಲ್ ಪಟೇಲ್ ಅವರ ಬಗ್ಗೆ ನೀಡಲಾದ ಹೇಳಿಕೆಗಳು ಪಕ್ಷದ ಒಳಗಟ್ಟಿನಲ್ಲಿ ಅಸಮಾಧಾನಕ್ಕೆ ಕಾರಣವಾಗಿದ್ದು, ಅವುಗಳನ್ನು ಹಿಂಪಡೆಯಬೇಕು ಎಂದು ಕಾರ್ಯಕರ್ತರು ಆಗ್ರಹಿಸಿದ್ದಾರೆ. ಜೇ ಎಂ ಕೊರಬು ಅವರಂತ ಹಿಂದುಳಿದ ವರ್ಗದ ನಾಯಕರಿಗೆ ಅವಮಾನವಾಗುತ್ತಿದೆ ಎಂಬ ಆರೋಪವೂ ಕೇಳಿಬಂದಿದ್ದು, ಇದು ಸಾಮಾಜಿ–ಕ ಸಮತೋಲನಕ್ಕೆ ಧಕ್ಕೆ ತರುತ್ತದೆ ಎಂದು ಮುಖಂಡರು ಎಚ್ಚರಿಕೆ ನೀಡಿದ್ದಾರೆ. ಅಷ್ಟೇ ಅಲ್ಲದೆ ಅಹಿಂದ ನಾಯಕರ ಬೆಂಬಲವಿಲ್ಲದೆ ಮಾನ್ಯ ಶಾಸಕರು ಗೆದ್ದು ತೋರಿಸಲಿ ಎಂದು ಸವಾಲು ಹಾಕಿದರೂ. ಮತ್ತು



ಪಕ್ಷದಲ್ಲಿ ಪ್ರಾಮಾಣಿಕವಾಗಿ ದುಡಿಯುತ್ತಿರುವ ಕಾರ್ಯಕರ್ತರಿಗೆ ಮಾನ್ಯತೆ ಸಿಗುತ್ತಿಲ್ಲ, ಹುದ್ದೆಗಳ ಹಂಚಿಕೆಯಲ್ಲಿ ಪಕ್ಷಪಾತ ನಡೆಯುತ್ತಿದೆ ಎಂಬುದೂ ಕಾರ್ಯಕರ್ತರ ಮತ್ತೊಂದು ಆಕ್ರೋಶದ ವಿಷಯವಾಗಿದೆ. ಚುನಾವಣೆಯ ಸಮೀಪದಲ್ಲಿ ಇಂತಹ ಒಳಜಗಳಗಳು ಪಕ್ಷದ ಬಲವನ್ನು ಕುಗ್ಗಿಸುವ ಸಾಧ್ಯತೆ ಇದೆ ಎಂದು ಹಿರಿಯರು ಆತಂಕ ವ್ಯಕ್ತಪಡಿಸಿದ್ದಾರೆ.

ಸ್ಥಿತಿ ಇದೇ ರೀತಿಯಾಗಿ ಮುಂದುವರೆದರೆ ಉಸ್ತುವಾರಿ ಸಚಿವ ಪ್ರಿಯಾಂಕ್ ಖರ್ಗೆ ಅವರ ಮನೆ ಮುಂದೆ ಧರಣಿ ಸತ್ಯಾಗ್ರಹ ನಡೆಸುವುದಾಗಿ ಅತೃಪ್ತ ಕಾರ್ಯಕರ್ತರು ಎಚ್ಚರಿಕೆ ನೀಡಿದ್ದಾರೆ. ಅಲ್ಲದೆ, ಜಿಲ್ಲಾ ಮಟ್ಟದ ನಾಯಕರ ಗಮನಕ್ಕೂ ವಿಷಯವನ್ನು ತರಲಾಗುವುದು ಎಂದು ತಿಳಿಸಿದ್ದಾರೆ.

ಈ ವೇಳೆ ಜಮೀಲ್ ಗೌಂಡಿ, ವಿಜಯಕುಮಾರ್ ಪಾಟೀಲ್, ನಿಜಮುದ್ದಿನ್ ಜಮಾದಾರ್, ಲತೀಫ್ ಪಟೇಲ್, ಪ್ರಶಾಂತ್ ಮ್ಯಾಕೇರಿ, ಶರಣು ಮಂಗಳೂರ, ಬೀರಪ್ಪ ಪೂಜಾರಿ ಸೇರಿದಂತೆ ಅನೇಕ ಮುಖಂಡರು ಉಪಸ್ಥಿತರಿದ್ದರು.

# ಯುವ ಸಿವಿಲ್ ಇಂಜಿನಿಯರುಗಳಿಗೆ ತಾಂತ್ರಿಕ ಕಾರ್ಯಾಗಾರ



ಕಲಬುರಗಿ: ಯುವ ಸಿವಿಲ್ ಇಂಜಿನಿಯರುಗಳಿಗಾಗಿ ನಗರದ ಖಾಸಗಿ ಹೊಟೇಲ್‌ನಲ್ಲಿ ಸರ್ಫಾ ಕೋಟ್ಸ್ ಪೈಂಟ್ಸ್ ವತಿಯಿಂದ ತಾಂತ್ರಿಕ ಕಾರ್ಯಾಗಾರ ಆಯೋಜಿಸಲಾಗಿ–ತ್ತು .ಸಿವಿಲ್ ಇಂಜಿನಿಯರ್ ಹಾಗೂ ಕರ್ನಾಟಕ ವೃತ್ತಿಪರ ಸಿವಿಲ್ ಇಂಜಿನಿಯರ್ ಪರಿಷತ್ ಸದಸ್ಯ ಮುರಳೀಧರ ಕರಲಗಿಕರ್ ಉದ್ಘಾಟನೆ ಮಾಡಿದರು

ನಂತರ ಕಂಪನಿಯ ಉತ್ತರ ಕರ್ನಾಟಕ ದ ಮಾರುಕಟ್ಟೆ ವ್ಯವಸ್ಥಾಪಕ ಶ್ರೀಧರ ಸಫಾರೆ ಅವರು ಸವಿಸ್ತಾರವಾಗಿ ತಾಂತ್ರಿಕ ಸಲಹೆ ಮತ್ತು ಸೂಚನೆ ನೀಡಿದರು.ವೇದಿಕೆಮೇಲೆ ಸಿವಿಲ್ ಇಂಜಿನಿಯರಗಳಾದ ಅಂಬರೀಷ್ ಪಾಟೀಲ್, ವಿನಯ ಪಾಟೀಲ್, ರಾಜು ಕುಲಕರ್ಣಿ, ಅನಿಲಕುಮಾರ ಗಂಗಾಣೆ, ಗುರುರಾಜ ಪೈಂಟ್ಸ್, ಮಲ್ಲಿಕಾರ್ಜುನ್ ಕುಲಕರ್ಣಿ, ಸ್ಥಳೀಯ ಮಾರುಕಟ್ಟೆ ಅಧಿಕಾರಿ ಚಂದ್ರಶೇಖರ ಪಾಟೀಲ್, ಸಂದೀಪ್, ತೀರ್ಥಪ್ಪಾ, ವಿಜಯಕುಮಾರ ಗಂಗಾಣೆ, ಶರಣು, ಶಿವು ಬಿರಾದಾರ್ ಉಪಸ್ಥಿತರಿದ್ದರು

# ಪ್ರಥಮ ಸ್ವಾತಂತ್ರ್ಯ ಹೋರಾಟಗಾರ ಮಂಗಲಪಾಂಡೆ



ಕಲಬುರಗಿ:ವ್ಯಾಪರಕ್ಕಾಗಿ ಭಾರತಕ್ಕೆ ಆಗಮಿಸಿದ ಬ್ರೀಟಿಷರು ಒಡೆದಾಳುವ ನೀತಿಯ ಮೂಲಕ ಸುಮಾರು 250 ವರ್ಷಗಳ ಕಾಲ ಆಡಳಿತ ಮಾಡಿ ದೇಶವನ್ನು ದಾಸ್ಯಕ್ಕೀಡು ಮಾಡಿದರು. ದೇಶದ ಸ್ವಾತಂತ್ರ್ಯಕ್ಕಾಗಿ ಅನೇಕ ಮಹನೀಯರು ಹೋರಾಟ ಮಾಡಿದರು. ಪ್ರಥಮ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಭಾರತದ ಸ್ವಾತಂತ್ರ್ಯಕಾಗ್ಕಿ ಪ್ರಥಮ ಬಾರಿಗೆ ಧ್ವನಿ ಎತ್ತುವ ಮೂಲಕ ಮಂಗಲಪಾಂಡೆ ಸ್ವಾತಂತ್ರ್ಯ ಚಳುವಳಿಗೆ ನಾಂದಿ ಹಾಡಿದ ಅಪ್ರತಿಮ ದೇಶಭಕ್ತರೆಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ ಅಭಿಪ್ರಾಯಪಟ್ಟರು.

ನಗರದ ಆಳಂದ ರಸ್ತೆಯ ಶಿವ ನಗರದಲ್ಲಿರುವ 'ಜ್ಞಾನ ಚಿಗುರು ಟ್ಯುಟೋರಿಯಲ್ಸ್'ನಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ವತಿಯಿಂದ ಜರುಗಿದ 'ಮಂಗಲಪಾಂಡೆ ಸ್ಮರಣೋತ್ಸವ'ದಲ್ಲಿ ಮಾತನಾಡುತ್ತಿದ್ದ ಅವರು, ಮಂಗಲಪಾಂಡೆ ಇತಿಹಾಸದಲ್ಲಿ ಅಜರಾಮರವಾಗಿದ್ದಾರೆ. ಅವರಲ್ಲಿರುವ ಅಪ್ಪಟ ದೇಶಭಕ್ತಿ ಇಂದಿನ ಎಲ್ಲಾ ಯುವಕರಿಗೆ ಮಾದರಿಯಾಗಿದೆ ಎಂದರು.

ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ಅಮರ ಜಿ.ಬಂಗರಗಿ, ಶಿವಯೋಗೆಪ್ಪಾ ಎಸ್.ಬಿರಾದಾರ, ಮುಖ್ಯ ಶಿಕ್ಷಕಿ ಚಂಪಾಕಲಾ ನೆಲ್ಲುರೆ ಹಾಗೂ ವಿದ್ಯಾರ್ಥಿಗಳು ಇದ್ದರು.

# ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ನಿಮಿತ್ತ ಸಾಧಕಿಯರಿಗೆ ಸನ್ಮಾನ


ಕಲಬುರಗಿ: ಭಾರತೀಯ ರೆಡ್ ಕ್ರಾಸ್ ಸಂಸ್ಥೆ ಜಿಲ್ಲಾ ಶಾಖೆ ಹಾಗೂ ಸರಕಾರಿ ಮಹಿಳಾ ಪ್ರಥ–ಮ ದರ್ಜೆ ಕಾಲೇಜು, ಜೇವರ್ಗಿ ಕಾಲೋನಿ ಇವರ ಸಂಯುಕ್ತ ಆಶ್ರಯದಲ್ಲಿ ಅಂತರಾಷ್ಟ್ರೀಯ ಮಹಿಳಾ ದಿನಾಚರಣೆ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದ ಮಹಿಳೆಯರನ್ನು ಸನ್ಮಾನ ಸಮಾರಂಭವನ್ನು ಬುಧವಾರ ಯಶಸ್ವಿಯಾಗಿ ನಡೆಸಲಾಯಿತು.

# ಯತ್ನಾಳ ಗ್ರಾಮದಲ್ಲಿ ಸ್ಮಶಾನ ಭೂಮಿಗಾಗಿ ಶವ ಇಟ್ಟು ಗ್ರಾಮಸ್ಥರಿಂದ ಪ್ರತಿಭಟನೆ

ಯಡ್ರಾಮಿ:ಯತ್ನಾಳ ಗ್ರಾಮದಲ್ಲಿ ಸ್ಮಶಾನ ಭೂಮಿ ಇಲ್ಲದ ಕಾರಣ ಸ್ಮಶಾನ ಭೋಮಿಗಾಗಿ ಶವ ಇಟ್ಟು ಗ್ರಾಮಸ್ಥರಿಂದ ಪ್ರತಿಭಟನೆ ಮಾಡಿದ ಘಟನೆ ನಡೆಯಿತ್ತು.

ಬುಧವಾರ ಯತ್ನಾಳ ಗ್ರಾಮದಲ್ಲಿ ಚಂದಪ್ಪ ತಂದೆ ಸಂಗಪ್ಪ ಬಡಗೇರ ವಯಸ್ಸು 53 ವರ್ಷದ ವ್ಯಕ್ತಿ ಮೃತಪಟ್ಟಿದ್ದ.ಗ್ರಾಮದ ಪಕ್ಕದ ಜಮೀನಿನಲ್ಲಿ ಅನಾದಿಕಾಲದಿಂದ ಶವ ಸಂಸ್ಕಾರ ಮಾಡಲಾಗುತ್ತಿತ್ತು.

ಶವ ಸಂಸ್ಕಾರ ಮಾಡಲು ಗ್ರಾಮಸ್ಥರು ಮುಂದಾಗ ಜಮೀನಿನ ಮಾಲಿಕ ನಿರಾಕರಿಸುತ್ತಾರೆ. ಅನಾದಿಕಾಲದಿಂದ ಶವ ಸಂಸ್ಕಾರ ಈ ಜಮೀನಲ್ಲಿ ಮಾಡಲಾಗಿದೆ ಇಗ ಈ ರೀತಿಯಾಗಿ ಹೇಳಿದರೆ ಹೇಗೆ ಎಂದು ಶವ ಸಂಸ್ಕಾರ ಇಲ್ಲೇ ಮಾಡುವುದಾಗಿ ಪಟ್ಟು ಹಿಡಿದರು. ಕಂಧಾಯ ಅಧಿಕಾರಿಗಳು ಬಂದು ಈ ಯತ್ನಾಳ ಗ್ರಾಮದಲ್ಲಿ ಸರ್ಕಾರಿ ಜಮೀನು ಇಲ್ಲಾ ಯಾರಾದರು ದಾನಿಗಳು ಇದ್ದರೆ ಮಾಡಿಸಿಕೊಡಬಹುದು ಎಂದು ಭರವಸೆ ನೀಡಿದರು. ಊರಿನ ಪ್ರಮುಖರು ನಮ್ಮ ಜಮೀನಿನಲ್ಲಿ ಮಾಡಿ ನಂತರ ನೋಡಿಕೊಳ್ಳುವೆ ಎಂದು ಹೇಳಿದಾಗ



ಬೇರೆಯವರ ಜಮೀನಿನಲ್ಲಿ ಶವಸಂಸ್ಕಾರ ಮಾಡಲಾಯಿತ್ತು.

**Printed by:** AVINASH BIDARI, **Published and owned by:** SHAILA INDUSHEKHAR MANUR **Printed at:** ARUN OFFSET PRINTERS,No.23, Sanjaygandhi Nagar, Indi Road, Vijayapura - 586101, Vijayapura Dist., Karnataka. **Published at:** At No.14, Silk City, Near Varasiddi Vinayaka Temple, Atalatti Link Road, Vijayapura -586102, Vijayapura Dist., Karnataka..**Editor :** INDUSHEKHAR MANUR